ಸಂಪುಟ : 11 ಸಂಚಿಕೆ: 47 ಪುಟ : 4+2 ಬೆಲೆ: 3.00 ಶನಿವಾರ ಮಾರ್ಚ್ 21 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 47 Pages : 4+2 Price : 3.00 Saturday March 21 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕೆರಿಯರ್ ಮೇಳ-2026: ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ವೃತ್ತಿ ಮಾರ್ಗದರ್ಶನ ಘಟಕ ಉದ್ಘಾಟಿಸಿದ ಡಿಸಿ

# "ಸ್ಪರ್ಧಾತ್ಮಕ ಯುಗದಲ್ಲಿ ಮಾರ್ಗದರ್ಶನವೇ ಯಶಸ್ಸಿನ ಕೀಲಿ"



> "ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳಿಗೆ ಸರಿಯಾದ ವೃತ್ತಿ ಮಾರ್ಗದರ್ಶನ ಸಿಕ್ಕರೆ ಯಶಸ್ಸಿನ ದಾರಿ ಸುಗಮವಾಗುತ್ತದೆ. ಕೆರಿಯರ್ ಮೇಳಗಳು ಅವರ ಭವಿಷ್ಯ ನಿರ್ಮಾಣಕ್ಕೆ ದಿಕ್ಕು ತೋರಿಸುವ ವೇದಿಕೆಗಳಾಗಿವೆ."
> – ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ



**■ ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಲು ವೃತ್ತಿ ಮಾರ್ಗದರ್ಶನ ಅತ್ಯಗತ್ಯವಾಗಿದ್ದು, ಸರಿಯಾದ ದಿಕ್ಕಿನಲ್ಲಿ ಸಾಗಲು ಕೆರಿಯರ್ ಮೇಳಗಳು ಪೂರಕವಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಅಭಿಪ್ರಾಯಪಟ್ಟರು.

ನಗರದ ಡಯಟ್ ಆವರಣದಲ್ಲಿ ಜಿಲ್ಲಾಡಳಿತ, ಜಿ.ಪಂ, ಸಮಗ್ರ ಶಿಕ್ಷಣ ಕರ್ನಾಟಕ, ಶಾಲಾ ಶಿಕ್ಷಣ ಇಲಾಖೆ ಹಾಗೂ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಸಂಯುಕ್ತ ಆಶ್ರಯದಲ್ಲಿ 9ರಿಂದ 12ನೇ ತರಗತಿಯ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಕೆರಿಯರ್ ಮೇಳ-2026 ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರದ ನಿರ್ದೇಶನದಂತೆ ಎಲ್ಲ ಜಿಲ್ಲೆಗಳ ಡಯಟ್ ಕೇಂದ್ರಗಳಲ್ಲಿ ವೃತ್ತಿ ಮಾರ್ಗದರ್ಶನ ಘಟಕಗಳನ್ನು ಆರಂಭಿಸಲಾಗುತ್ತಿದ್ದು, ಗದಗದಲ್ಲಿಯೂ ಇದರ ಅಧಿಕೃತ ಚಾಲನೆ ನೀಡಲಾಗಿದೆ. ವಿದ್ಯಾರ್ಥಿಗಳು ವಿಷಯ ತಜ್ಞರೊಂದಿಗೆ ಸಮಾಲೋಚನೆ ನಡೆಸಿ, ತಮ್ಮ ಆಸಕ್ತಿಗೆ ತಕ್ಕ ಮಾರ್ಗವನ್ನು ಆಯ್ಕೆ ಮಾಡಿಕೊಳ್ಳಬೇಕು ಎಂದು ಅವರು ಹೇಳಿದರು.

ಈ ಘಟಕದಲ್ಲಿ ಉನ್ನತ ಶಿಕ್ಷಣ, ವಿವಿಧ ಕೋರ್ಸ್‌ಗಳ ಮಾಹಿತಿ, ಅತ್ಯಮೂಲ್ಯ ಗ್ರಂಥಗಳು ಹಾಗೂ ಕಂಪ್ಯೂಟರ್-ಇಂಟರ್‌ನೆಟ್ ಸೌಲಭ್ಯ ಲಭ್ಯವಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆಯಬೇಕು ಎಂದು ತಿಳಿಸಿದರು.

ವಿದೇಶಗಳಲ್ಲಿ ವ್ಯಾಸಂಗ ಮತ್ತು ಭಾರತದಲ್ಲಿ ವ್ಯಾಸಂಗ ನಡುವೆ ಇಂದಿನ ದಿನಗಳಲ್ಲಿ ಹೆಚ್ಚಿನ ವ್ಯತ್ಯಾಸವಿಲ್ಲ. ಭಾರತದಲ್ಲಿಯೇ ಉನ್ನತ ಮಟ್ಟದ ಸಂಪನ್ಮೂಲಗಳು ಹಾಗೂ ತಜ್ಞರು ಲಭ್ಯವಿದ್ದು, ದೃಢಸಂಕಲ್ಪದೊಂದಿಗೆ ವಿದ್ಯಾರ್ಥಿಗಳು ಉನ್ನತ ಸಾಧನೆ ಮಾಡಬಹುದು ಎಂದು ಹೇಳಿದರು.

9ರಿಂದ 12ನೇ ತರಗತಿಯಲ್ಲಿಯೇ ವೃತ್ತಿ ಮಾರ್ಗದರ್ಶನ ಪಡೆದರೆ ಅರ್ಧ ದಾರಿ ಕ್ರಮಿಸಿದಂತಾಗುತ್ತದೆ. ಪಿಯುಸಿ ನಂತರ ಅನೇಕ ಅವಕಾಶಗಳು ದೊರೆಯುತ್ತವೆ ಎಂದು ಜಿಲ್ಲಾಧಿಕಾರಿ ತಿಳಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಯಟ್ ಉಪನಿರ್ದೇಶಕ ಹಾಗೂ ಪ್ರಾಂಶುಪಾಲರಾದ ಜಿ.ಎಂ. ಮುಂದಿನಮನಿ ಮಾತನಾಡಿ, ಮೇಳದಲ್ಲಿ ಜಿಲ್ಲೆಯ 865 ವಿದ್ಯಾರ್ಥಿಗಳು ಭಾಗವಹಿಸಿದ್ದು, ಇದು ಅವರ ಭವಿಷ್ಯ ನಿರ್ಮಾಣಕ್ಕೆ ಸಹಕಾರಿಯಾಗಲಿದೆ ಎಂದರು.

▶▶ 4ನೇ ಪುಟಕ್ಕೆ

### ಡಾ. ಅಂಬೇಡ್ಕರ್-ಜಗಜೀವನ ರಾಮ್ ಜಯಂತಿಗೆ ಜಿಲ್ಲೆಯಲ್ಲಿ ಭವ್ಯ ಸಿದ್ಧತೆ

# ಜಯಂತಿ ಆಚರಣೆಗೆ ಅರ್ಥಪೂರ್ಣ ಸ್ಪರ್ಶ: ರಕ್ತದಾನ, ಉಪನ್ಯಾಸಗಳಿಗೆ ಒತ್ತು!



**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಡಳಿತ ವತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನ ರಾಮ್ ಅವರ ಜಯಂತಿಗಳನ್ನು ಅರ್ಥಪೂರ್ಣವಾಗಿ ಮತ್ತು ವಿಜೃಂಭಣೆಯಿಂದ ಆಚರಿಸಲು ಪೂರ್ವ ಸಿದ್ಧತೆಗಳು ಜೋರಾಗಿ ನಡೆಯುತ್ತಿವೆ. ಈ ಸಂಬಂಧ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸಭೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ಮಹನೀಯರ ಜಯಂತಿಯನ್ನು ಕೇವಲ ಆಚರಣೆಗೆ ಸೀಮಿತಗೊಳಿಸದೇ, ಸಮಾಜಕ್ಕೆ ಪ್ರೇರಣೆ ನೀಡುವ ಕಾರ್ಯಕ್ರಮಗಳಾಗಿ ರೂಪಿಸಬೇಕು ಎಂದು ಸೂಚಿಸಿದರು.

ಎಪ್ರಿಲ್ 5ರಂದು ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನ ರಾಮ್ ಅವರ ಜಯಂತಿಯನ್ನು ಆಡಿಟೋರಿಯಂ ಹಾಲ್‌ನಲ್ಲಿ ಸಾಂಕೇತಿಕವಾಗಿ ಆಚರಿಸಲಾಗುವುದು. ಎಪ್ರಿಲ್ 14ರಂದು ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನ ರಾಮ್ ಜಯಂತಿಗಳನ್ನು ವಿವಿಧ ಸಂಘಟನೆಗಳೊಂದಿಗೆ ನಗರದ ಅಂಬೇಡ್ಕರ್ ಸಮುದಾಯ ಭವನದಲ್ಲಿ ಆಚರಿಸಲು ನಿರ್ಧರಿಸಲಾಗಿದೆ.

ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳಿಲ್ಲದಂತೆ ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಸಭೆಯಲ್ಲಿ ಭಾಗವಹಿಸಿದ ಸಮಾಜದ ಮುಖಂಡರು ಹಲವು ಸಲಹೆಗಳನ್ನು ನೀಡಿದರು. ಎಪ್ರಿಲ್ 5ರಂದು ರಕ್ತದಾನ ಶಿಬಿರ ಆಯೋಜಿಸಿ ಸಮಾಜಮುಖಿ ಕಾರ್ಯಕ್ಕೆ ಉತ್ತೇಜನ ನೀಡಬೇಕು ಎಂದು ಮನವಿ ಮಾಡಿದರು. ಇದರಿಂದ ಯುವಜನರಲ್ಲಿ ಸಾಮಾಜಿಕ ಹೊಣೆಗಾರಿಕೆ ಹೆಚ್ಚುವ ಜೊತೆಗೆ ಅಗತ್ಯವಿರುವವರಿಗೆ ರಕ್ತ ಲಭ್ಯವಾಗಲು ಸಹಕಾರಿ ಆಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಜಯಂತಿ ದಿನ ಉಪನ್ಯಾಸ ಕಾರ್ಯಕ್ರಮಗಳಿಗೆ ಹೆಚ್ಚಿನ ಆದ್ಯತೆ ನೀಡಬೇಕು. ಸಮಾಜದ ಗಣ್ಯರು, ಚಿಂತಕರು ಮತ್ತು ಉಪನ್ಯಾಸಕರು ಮಹನೀಯರ ಜೀವನ, ಸಾಧನೆಗಳು ಮತ್ತು ಕೊಡುಗೆಗಳ ಕುರಿತು ತಮ್ಮ ವಿಚಾರಗಳನ್ನು ಹಂಚಿಕೊಳ್ಳಲು ಅವಕಾಶ ಕಲ್ಪಿಸಬೇಕು ಎಂದು ಸಲಹೆ ನೀಡಿದರು.

ಇದಲ್ಲದೆ, ನಗರದಲ್ಲಿ ಸ್ವಚ್ಛತೆ, ಅಲಂಕಾರ, ಮೆರವಣಿಗೆ, ಸಾಂಸ್ಕೃತಿಕ ಕಾರ್ಯಕ್ರಮಗಳು ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಿ ಸಾರ್ವಜನಿಕರ ಹೆಚ್ಚಿನ ಭಾಗವಹಿಸುವಿಕೆಗೆ ಒತ್ತು ನೀಡುವ ಕುರಿತು ಚರ್ಚಿಸಲಾಯಿತು. ಫ್ಲೆಕ್ಸ್ ಹಾಗೂ ಬ್ಯಾನರ್ ಅಳವಡಿಕೆ ವಿಚಾರವೂ ಸಭೆಯಲ್ಲಿ ಪ್ರಸ್ತಾಪವಾಯಿತು.

ಸಭೆಯಲ್ಲಿ ಜಿಪಂ ಡಿಎಸ್ ಸಿ. ಆರ್ ಮುಂಡರಗಿ, ಹೆಚ್ಚುವರಿ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಡಿವೈಎಸ್ಪಿ ಮಹಾಂತೇಶ್ ಸಜ್ಜನರ, ಸಹಾಯಕ ಆಯುಕ್ತ ಗಂಗಪ್ಪ ಎಂ., ಡಿಎಸ್‌ಡಬ್ಲ್ಯೂ ಡಾ. ನಂದಾ ಹಣಬರಟ್ಟಿ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಾ. ಬಸವರಾಜ್ ಬಳ್ಳಾರಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.




# ಮಾ.23ರಂದು ದೇವರ ದಾಸಿಮಯ್ಯ ಜಯಂತಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಆದ್ಯ ವಚನಕಾರ, ನೇಕಾರ ಸಂತ ಶ್ರೀ ದೇವರ ದಾಸಿಮಯ್ಯನವರ ಜಯಂತಿಯನ್ನು ಮಾರ್ಚ್ 23ರಂದು ಬೆಳಿಗ್ಗೆ 11 ಗಂಟೆಗೆ ಗದಗ-ಬೆಟಗೇರಿ ಟರ್ನಲ್ ಪೇಟೆಯ ಶ್ರೀ ದೇವರ ದಾಸಿಮಯ್ಯ ವೇದಿಕೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಡಾ. ಶಿವರಾಜ ಎಸ್. ತಂಗಡಗಿ ಅವರು ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕ ಹಾಗೂ ವಿಧಾನ ಪರಿಷತ್ ಶಾಸಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ಶಾಸಕರಾದ ಸಿ.ಸಿ. ಪಾಟೀಲ, ಶಾಸಕ ಡಾ. ಚಂದ್ರು ಲಮಾಣಿ, ವಿಧಾನ ಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ ಮತ್ತು ಪ್ರದೀಪ್ ಶೆಟ್ಟರ್ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ.

ಇದಲ್ಲದೆ, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ ಹಾಗೂ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ.ಬಿ. ಅಸೂಟಿ ಆಗಮಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯ ಕಾರ್ಯದರ್ಶಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರವಂಣದೀಪ್

▶▶ 4ನೇ ಪುಟಕ್ಕೆ






## ದಾವಣಗೆರೆ ದಕ್ಷಿಣ ಉಪಚುನಾವಣೆ:

# IPC ಪಕ್ಷದಿಂದ ಈರಣ್ಣ ಕಣಕ್ಕೆ



**■ವಿಜಯಸಾಕ್ಷಿ ಸುದ್ದಿ, ದಾವಣಗೆರೆ**

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪಚುನಾವಣೆಗೆ ಇಂಡಿಯನ್ ಪೊಲಿಟಿಕಲ್ ಕಾಂಗ್ರೆಸ್ (IPC) ಪಕ್ಷದಿಂದ ಈರಣ್ಣ ಅವರು ಅಧಿಕೃತ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಇ. ಆನಂದ್, "ಈರಣ್ಣ ಅವರು ಸ್ಥಳೀಯವಾಗಿ ಬಲಿಷ್ಠ ಅಭ್ಯರ್ಥಿಯಾಗಿದ್ದು, ಜನರೊಂದಿಗೆ ನಿಕಟ ಸಂಪರ್ಕ ಹೊಂದಿದ್ದಾರೆ. ಅವರು ಚುನಾವಣೆಯಲ್ಲಿ ಪ್ರಬಲ ಸ್ಪರ್ಧೆ ನೀಡಲಿದ್ದಾರೆ ಎಂಬ ವಿಶ್ವಾಸ ನಮ್ಮದು," ಎಂದು ಹೇಳಿದರು.


ರಾಜ್ಯಾಧ್ಯಕ್ಷ ಎಸ್.ಎಸ್. ರೆಡ್ಡೇರ್ ಮಾತನಾಡಿ, "ಈರಣ್ಣ ಅವರು ಎರಡು ಪ್ರಮುಖ ರಾಷ್ಟ್ರೀಯ ಪಕ್ಷಗಳಿಗೆ ಸಮಾನವಾಗಿ ಸವಾಲು ನೀಡಬಲ್ಲ ಸಾಮರ್ಥ್ಯ ಹೊಂದಿದ್ದಾರೆ. ಕ್ಷೇತ್ರದಲ್ಲಿ ಈಗಾಗಲೇ ಸಂಘಟನಾ ಬಲವನ್ನು ನಿರ್ಮಿಸಿಕೊಂಡಿರುವುದು ನಮ್ಮ ಪಕ್ಷದ ದೊಡ್ಡ ಬಲವಾಗಿದೆ," ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಮಹಿಳಾ ಅಧ್ಯಕ್ಷೆ ಉಮಾ ವಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರಶಾಂತ್ ಸೇರಿದಂತೆ ಪಕ್ಷದ ಸ್ಥಳೀಯ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.



**ಗದಗ:** ದಶನಾಗರ ಗುಜರಾತಿ ಸಮಾಜದ ಮಹಿಳಾ ಮಂಡಳಿ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ನಗರದ ಸರಾಫ್ ಬಜಾರ್ ಪ್ರದೇಶದಲ್ಲಿನ ರಾಜಾ ಕಾಂಪ್ಲೆಕ್ಸ್‌ನಲ್ಲಿ ಸೋಮವಾರ ಆಚರಿಸಲಾಯಿತು.

# ಅಪ್ಪು ಜನ್ಮದಿನಕ್ಕೆ ದೇವು ಫಿಟ್ನೆಸ್‌ನಲ್ಲಿ ವಿಶೇಷ ಸ್ಮರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ದೇವು ಫಿಟ್ನೆಸ್ನಲ್ಲಿ ಇತ್ತೀಚೆಗೆ ವ್ಯಾಯಾಮ ಶಾಲೆಯ ಎಲ್ಲಾ ವಿದ್ಯಾರ್ಥಿಗಳು ದಿವಂಗತ ಪುನೀತ್ ರಾಜ್‌ಕುಮಾರ್ ಅವರ ಜನ್ಮ ದಿನದ ಪ್ರಯುಕ್ತ ಹುಟ್ಟುಹಬ್ಬವನ್ನು ಸ್ಮರಣೀಯವಾಗಿ ಆಚರಿಸಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಪುನೀತ್ ರಾಜ್ ಕುಮಾರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಕೇಕ್ ಕತ್ತರಿಸಿ ಗೌರವ ಸಲ್ಲಿಸಿದರು. ಅವರ ಜೀವನ ಮೌಲ್ಯಗಳು, ಸಮಾಜ ಸೇವೆ ಮತ್ತು ಯುವಕರಿಗೆ ನೀಡಿದ ಪ್ರೇರಣೆಗಳನ್ನು ಸ್ಮರಿಸಲಾಯಿತು.

ಕಾರ್ಯಕ್ರಮದಲ್ಲಿ ತರಬೇತುದಾರರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿ, ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ಪ್ರತಿಜ್ಞೆ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ದೇವು, ಪರಶುರಾಮ ಸುಂಕದ, ದೇವು ಮೇದಾರ ಹಾಗೂ ರವಿ ಭಂಡಾರಿ ಇದ್ದರು.

## ರಮಝಾನ್: ಹಸಿವಿನ ಹಿಂದೆ ಅಡಗಿರುವ ಆತ್ಮಶುದ್ಧಿಯ ಮಹಾ ರಹಸ್ಯ!

# ಪವಿತ್ರ ಆರಾಧನೆ ಮತ್ತು ಆತ್ಮಶುದ್ಧಿಯ ಮಾರ್ಗ!

ರಮಝಾನ್ ತಿಂಗಳು ಜಗತ್ತಿನ ಮುಸ್ಲಿಂ ಸಮುದಾಯಕ್ಕೆ ಅತ್ಯಂತ ಪವಿತ್ರ ಮತ್ತು ಮಹತ್ವದ ಕಾಲ. ಈ ತಿಂಗಳಲ್ಲಿ ಪ್ರತಿಯೊಬ್ಬ ಮುಸ್ಲಿಂ ಶ್ರದ್ಧೆ, ಭಕ್ತಿ ಮತ್ತು ನಿಯಮಶೀಲತೆಯೊಂದಿಗೆ ಉಪವಾಸ (ರೋಜಾ) ವ್ರತವನ್ನು ಆಚರಿಸುತ್ತಾನೆ. ಸೂರ್ಯೋದಯಕ್ಕೂ ಮುನ್ನ 'ಸಹರಿ' ಸೇವಿಸಿ ಆರಂಭವಾಗುವ ಈ ಉಪವಾಸವು, ಸೂರ್ಯಾಸ್ತದ ಬಳಿಕ ಖರ್ಜೂರದೊಂದಿಗೆ ಮುಕ್ತಾಯಗೊಳ್ಳುತ್ತದೆ.

ಒಂದು ತಿಂಗಳ ಕಾಲ ಅನ್ನ, ಪಾನೀಯ, ಆಸೆ–ಆಕಾಂಕ್ಷೆಗಳನ್ನು ತೊರೆದು, ದಿನಕ್ಕೆ ಐದು ಬಾರಿ ನಮಾಜ್ ಸಲ್ಲಿಸುವ ಮೂಲಕ ಭಕ್ತನು ತನ್ನನ್ನು ದೇವರ ಕಡೆಗೆ ಸಂಪೂರ್ಣವಾಗಿ ಸಮರ್ಪಿಸುತ್ತಾನೆ. ಇದು ಕೇವಲ ದೈಹಿಕ ನಿಯಮವಲ್ಲ, ಆಧ್ಯಾತ್ಮಿಕ ಶುದ್ಧೀಕರಣದ ಪ್ರಕ್ರಿಯೆಯಾಗಿದೆ.

ರಮಝಾನ್ ಉಪವಾಸದ ಅಂತ್ಯದಲ್ಲಿ ಬರುವ ಹಬ್ಬವೇ ಈದುಲ್ ಫಿತ್ರ್. "ಈದ್" ಎಂದರೆ ಸಂತೋಷ, "ಫಿತ್ರ್" ಎಂದರೆ ದಾನ. ಈ ಹಬ್ಬವು ದಾನಧರ್ಮದ ಮಹತ್ವವನ್ನು ಸಾರುತ್ತದೆ. ಪ್ರತಿಯೊಬ್ಬ ಸಮರ್ಥ ಮುಸ್ಲಿಂ ತನ್ನ



ಹಾಗೂ ತನ್ನ ಕುಟುಂಬದ ಪರವಾಗಿ ಬಡವರಿಗೆ ಆಹಾರಧಾನ್ಯ ಅಥವಾ ದಾನ ನೀಡುವುದು ಕಡ್ಡಾಯ. ಇದನ್ನು ಫಿತ್ರ್ ಝಕಾತ್ ಎಂದು ಕರೆಯಲಾಗುತ್ತದೆ. ಹಬ್ಬದ ಪ್ರಾರ್ಥನೆಗೂ ಮುನ್ನ ಈ ದಾನವನ್ನು ವಿತರಿಸುವುದು ಧರ್ಮದ ನಿಯಮವಾಗಿದೆ.

ಪವಿತ್ರ ಕುರ್‌ಆನ್‌ನಲ್ಲಿ ಉಪವಾಸದ ಉದ್ದೇಶವನ್ನು ಸ್ಪಷ್ಟವಾಗಿ ವಿವರಿಸಲಾಗಿದೆ: "ಓ ಸತ್ಯವಿಶ್ವಾಸಿಗಳೇ! ನಿಮಗೆ ಮುಂಚಿನವರ ಮೇಲೆ ವಿಧಿಸಲಾದಂತೆ ನಿಮ್ಮ ಮೇಲೂ ಉಪವಾಸವನ್ನು ವಿಧಿಸಲಾಗಿದೆ, ನೀವು ಧರ್ಮನಿಷ್ಠರಾಗುವಿರಿ" (ಅಲ್ ಬಕರ: 183).

ಇದರ ಮೂಲಕ ಉಪವಾಸವು ಆತ್ಮನಿಯಂತ್ರಣ, ಸಹನೆ ಮತ್ತು ಧರ್ಮನಿಷ್ಠೆಯ ಬೆಳವಣಿಗೆಗೆ ದಾರಿಯಾಗುತ್ತದೆ. ಮಾನವನ ಆಸೆ–ಆಕಾಂಕ್ಷೆಗಳನ್ನು ನಿಯಂತ್ರಿಸುವ ಮೂಲಕ ಅವನು ತನ್ನ ಆಧ್ಯಾತ್ಮಿಕ ಮಟ್ಟವನ್ನು ಏರಿಸಿಕೊಳ್ಳಲು ಸಾಧ್ಯವಾಗುತ್ತದೆ.

ಉಪವಾಸವು ಮೇಲ್ನೋಟಕ್ಕೆ ಆಹಾರ–ಪಾನೀಯದಿಂದ ದೂರವಿರುವುದಷ್ಟೇ ಅಲ್ಲ; ಅದು ಒಳನೋಟದಲ್ಲಿ ವ್ಯಕ್ತಿಯ ಚಿಂತನೆ, ವರ್ತನೆ ಮತ್ತು ನೈತಿಕತೆಗಳನ್ನು ಶುದ್ಧಗೊಳಿಸುವ ಪ್ರಕ್ರಿಯೆ. ಈ ಸಮಯದಲ್ಲಿ ವ್ಯಕ್ತಿ ಪಾಪಗಳಿಂದ ದೂರವಿದ್ದು, ದೇವರ ಸ್ಮರಣೆ ಮತ್ತು ಆರಾಧನೆಯಲ್ಲಿ ತಲ್ಲೀನನಾಗಿರುತ್ತಾನೆ.

ಪ್ರವಾದಿ ಮುಹಮ್ಮದ್ (ಸ) ಅವರು ರಮಝಾನ್ ಅನ್ನು "ಸಹನೆಯ ತಿಂಗಳು" ಎಂದು ವರ್ಣಿಸಿದ್ದಾರೆ. ಈ ತಿಂಗಳು ಮಾನವನಲ್ಲಿ ಸಹಾನುಭೂತಿ, ದಯೆ ಮತ್ತು ಮಾನವೀಯತೆಗಳನ್ನು ಬೆಳೆಸುತ್ತದೆ. ಬಡವರ ನೋವು ಅರಿತು ಅವರಿಗೆ ನೆರವಾಗುವ ಮನೋಭಾವವನ್ನು ಹೆಚ್ಚಿಸುತ್ತದೆ.

ಈದುಲ್ ಫಿತ್ರ್ ಕೇವಲ ಹಬ್ಬವಲ್ಲ; ಅದು ಸಮಾನತೆ, ಸಹಾನುಭೂತಿ ಮತ್ತು ಸಾಮಾಜಿಕ ಒಗ್ಗಟ್ಟಿನ ಸಂಕೇತವಾಗಿದೆ. ಯಾರೂ ಹಬ್ಬದ ಸಂತೋಷದಿಂದ ವಂಚಿತರಾಗಬಾರದು ಎಂಬುದು ಇದರ ಮೂಲ ಉದ್ದೇಶ. ರಮಝಾನ್ ಉಪವಾಸವು ಮಾನವನನ್ನು ದೇವರತ್ತ ಕರೆದೊಯ್ಯುವ, ಅವನ ಆತ್ಮವನ್ನು ಶುದ್ಧಗೊಳಿಸುವ ಮತ್ತು ಜೀವನದ ಉನ್ನತ ಮೌಲ್ಯಗಳನ್ನು ಅರಿಯುವ ಪವಿತ್ರ ಮಾರ್ಗವಾಗಿದೆ.

ಇದು ಕೇವಲ ಒಂದು ತಿಂಗಳ ಆಚರಣೆ ಮಾತ್ರವಲ್ಲ, ಇಡೀ ಜೀವನಕ್ಕೆ ಮಾರ್ಗದರ್ಶಕವಾಗಿದೆ. ಕೊನೆಯಲ್ಲಿ, ಜಗತ್ತಿನ ಎಲ್ಲರಿಗೂ ಶಾಂತಿ, ಸಹೋದರತೆ ಮತ್ತು ಸೌಹಾರ್ದತೆಯನ್ನು ತರಲಿ ಎಂಬುದು ಈ ಪವಿತ್ರ ರಮಝಾನ್ ಮತ್ತು ಈದುಲ್ ಫಿತ್ರ್ ಹಬ್ಬದ ಸಂದೇಶ.



**–ಡಾ. ತಯಬಅಲಿ. ಅ. ಹೊಂಬಳ**, ಗದಗ

## ಧರ್ಮಗಳ ಮಿಲನ, ಹೃದಯಗಳ ಏಕತೆ – ಹಬ್ಬಗಳ ಮೂಲಕ ಮಾನವೀಯತೆಯ ಮಹೋತ್ಸವ..!

# ಯುಗಾದಿ–ರಂಜಾನ್ ಸಂಗಮ: ಸೌಹಾರ್ದತೆಯ ಸಂದೇಶ!

ಭಾರತದ ಸಾಂಸ್ಕೃತಿಕ ವೈವಿಧ್ಯತೆ ವಿಶ್ವದಲ್ಲೇ ಅನನ್ಯ. ಇಲ್ಲಿ ಹಬ್ಬಗಳು ಕೇವಲ ಆಚರಣೆಗಳಲ್ಲ, ಅವು ಜನರ ಜೀವನದ ಮೌಲ್ಯಗಳನ್ನು ರೂಪಿಸುವ, ಸಮಾಜವನ್ನು ಒಗ್ಗೂಡಿಸುವ ಶಕ್ತಿಯಾಗಿದೆ. ಇಂತಹ ಸನ್ನಿವೇಶದಲ್ಲಿ ಯುಗಾದಿ ಮತ್ತು ರಂಜಾನ್ ಒಂದೇ ಅವಧಿಯಲ್ಲಿ ಬರುವುದು ಕೇವಲ ಕಾಲಸಮ್ಮಿಲನವಲ್ಲ – ಅದು ಸೌಹಾರ್ದತೆ ಮತ್ತು ಸಹೋದರತ್ವದ ಜೀವಂತ ಉದಾಹರಣೆ.

ಯುಗಾದಿ ಹೊಸ ವರ್ಷದ ಶುಭಾರಂಭ. ಇದು ಬದುಕಿನಲ್ಲಿ ಹೊಸ ಚೈತನ್ಯವನ್ನು ತುಂಬುತ್ತದೆ. ಹೊಸ ಕನಸುಗಳಿಗೆ ಬಾಗಿಲು ತೆರೆದು, ಜೀವನವನ್ನು ಹೊಸ ದೃಷ್ಟಿಕೋನದಿಂದ ನೋಡುವಂತೆ ಮಾಡುತ್ತದೆ. ಯುಗಾದಿಯ ಬೇವು–ಬೆಲ್ಲ ತಿನಿಸು ಜೀವನದ ಸಿಹಿ–ಕಹಿ ಅನುಭವಗಳನ್ನು ಸಮಬಾಳುವ ಪಾಠವನ್ನು ನೀಡುತ್ತದೆ. ಈ ಹಬ್ಬವು ನಮಗೆ ಧೈರ್ಯ, ಸಹನೆ ಮತ್ತು ನಿರೀಕ್ಷೆಯ ಮೌಲ್ಯಗಳನ್ನು ನೆನಪಿಸುತ್ತದೆ.

ಇನ್ನೊಂದೆಡೆ, ರಂಜಾನ್ ಪವಿತ್ರತೆಯ ಸಂಕೇತ. ಉಪವಾಸದ ಮೂಲಕ ದೇಹ ಮತ್ತು ಮನಸ್ಸನ್ನು ಶುದ್ಧಗೊಳಿಸುವುದು ಮಾತ್ರವಲ್ಲದೆ, ಬಡವರ ನೋವನ್ನು ಅರಿಯುವ ಮಾನವೀಯ ಗುಣವನ್ನು ಬೆಳೆಸುತ್ತದೆ. ದಾನಧರ್ಮ, ಸಹನೆ, ನಿಯಮ ಮತ್ತು ಭಕ್ತಿ – ಈ ಎಲ್ಲಾ ಮೌಲ್ಯಗಳನ್ನು ಒಟ್ಟುಗೂಡಿಸುವ ಹಬ್ಬವೇ ರಂಜಾನ್. ಇದು ವ್ಯಕ್ತಿಯ ಒಳನೋಟವನ್ನು ಹೆಚ್ಚಿಸಿ, ಆತ್ಮಶುದ್ಧಿಗೆ ದಾರಿ ಮಾಡಿಕೊಡುತ್ತದೆ. ಈ ಎರಡೂ ಹಬ್ಬಗಳು ಒಂದೇ ಸಮಯದಲ್ಲಿ ಬಂದಾಗ, ಅದು ಸಮಾಜಕ್ಕೆ ಅತ್ಯಂತ ಬಲವಾದ ಸಂದೇಶವನ್ನು ನೀಡುತ್ತದೆ – "ನಾವು ಬೇರೆ ಧರ್ಮದವರಾದರೂ, ಮಾನವೀಯತೆಯಲ್ಲಿ ಒಂದೇ". ಇವುಗಳ ಸಂಗಮವು ಪರಸ್ಪರ ಗೌರವ, ಪ್ರೀತಿ ಮತ್ತು ಸಹಬಾಳ್ವೆಯ ಮಹತ್ವವನ್ನು ಮತ್ತಷ್ಟು ಗಾಢಗೊಳಿಸುತ್ತದೆ.

ಇಂದಿನ ಸಮಾಜದಲ್ಲಿ ಭಿನ್ನಾಭಿಪ್ರಾಯಗಳು, ಬೇಧಗಳು ಹೆಚ್ಚುತ್ತಿರುವ ಸಂದರ್ಭದಲ್ಲಿ, ಇಂತಹ ಹಬ್ಬಗಳ ಸಮ್ಮಿಲನ ನಮ್ಮನ್ನು ಒಗ್ಗೂಡಿಸುವ ಶಕ್ತಿಯಾಗಿದೆ. ಧರ್ಮ, ಜಾತಿ, ಭಾಷೆ



ಎಂಬ ಎಲ್ಲ ಗಡಿಗಳನ್ನು ಮೀರಿ, ನಾವು ಒಬ್ಬರನ್ನೊಬ್ಬರು ಅರ್ಥಮಾಡಿಕೊಳ್ಳಬೇಕು. ನಮ್ಮ ಸುತ್ತಲಿನವರೊಂದಿಗೆ ಪ್ರೀತಿ ಹಂಚಿಕೊಂಡು, ಸಹಕಾರದ ಜೀವನ ನಡೆಸುವುದು ನಿಜವಾದ ಹಬ್ಬದ ಅರ್ಥ.

**"ಹಬ್ಬಗಳು ಕೇವಲ ಆಚರಣೆಗಳಲ್ಲ, ಅವು ಮಾನವೀಯತೆಯ ಹೃದಯವನ್ನು ಒಂದಾಗಿಸುವ ಸೇತುವೆಗಳು."**

> "ಸಮಾಜ ಸೇವೆ ಎಂದರೆ ಕೇವಲ ನೆರವು ನೀಡುವುದಲ್ಲ, ಜನರಲ್ಲಿ ಆತ್ಮವಿಶ್ವಾಸ ಮತ್ತು ಆಶೆಯನ್ನು ಹುಟ್ಟಿಸುವುದು."
>
> **– ಡಾ. ಬಾನಮ್ಮ**

ಈ ಪವಿತ್ರ ಸಂದರ್ಭದಲ್ಲಿ ಪ್ರತಿಯೊಬ್ಬರೂ ಮನಸ್ಸಿನಲ್ಲಿ ದ್ವೇಷವನ್ನು ದೂರ ಮಾಡಿ, ಶಾಂತಿ ಮತ್ತು ಸೌಹಾರ್ದತೆಯ ದಾರಿಯನ್ನು ಆರಿಸಬೇಕು. ಯುಗಾದಿಯ ಹೊಸ ಬೆಳಕು ಮತ್ತು ರಂಜಾನ್‌ನ ಪವಿತ್ರತೆ ನಮ್ಮ ಬದುಕಿನಲ್ಲಿ ಸದಾ ಉಳಿಯಲಿ.

ಸಮಾಜಮುಖಿ ಸೇವೆಯಲ್ಲಿ ಡಾ. ಬಾನಮ್ಮ ಅವರ ಪ್ರೇರಣಾದಾಯಕ ಪಾತ್ರ: ವಿಜಯನಗರ ಜಿಲ್ಲೆಯ ಕಾಂಗ್ರೆಸ್ ಮಹಿಳಾ ಘಟಕದ ಜಿಲ್ಲಾ ಅಧ್ಯಕ್ಷೆಯಾಗಿ ಕಾರ್ಯನಿರ್ವಹಿಸುತ್ತಿರುವ ಡಾ. ಬಾನಮ್ಮ ಅವರು ಸಮಾಜಮುಖಿ ಸೇವೆಯಲ್ಲಿ ವಿಶಿಷ್ಟ ಗುರುತನ್ನು ಗಳಿಸಿದ್ದಾರೆ. ಮಹಿಳಾ ಸಬಲೀಕರಣ, ಬಡವರ ಸಹಾಯ, ಆರೋಗ್ಯ ಜಾಗೃತಿ ಮತ್ತು ಶಿಕ್ಷಣ ವಿಸ್ತರಣೆ ಕ್ಷೇತ್ರಗಳಲ್ಲಿ ಅವರು ಮಾಡುತ್ತಿರುವ ಕೆಲಸ ಗಮನಾರ್ಹವಾಗಿದೆ. ಹಗರಿಬೊಮ್ಮನಹಳ್ಳಿ ಪ್ರದೇಶದಲ್ಲಿ ಅವರು ಕೈಗೊಂಡಿರುವ ಸೇವಾ ಚಟುವಟಿಕೆಗಳು ಅನೇಕ ಜನರ ಬದುಕಿನಲ್ಲಿ ಬೆಳಕು ತಂದಿವೆ. ಮಹಿಳೆಯರಿಗೆ ಅವರ ಹಕ್ಕುಗಳ ಬಗ್ಗೆ ಅರಿವು ಮೂಡಿಸಿ, ಆತ್ಮವಿಶ್ವಾಸದಿಂದ ಸಮಾಜದಲ್ಲಿ ಮುಂದುವರಿಯಲು ಪ್ರೇರೇಪಿಸುತ್ತಿದ್ದಾರೆ. ಅವರ ನಾಯಕತ್ವದಲ್ಲಿ ಹಲವಾರು ಮಹಿಳೆಯರು ತಮ್ಮ ಬದುಕನ್ನು ಸ್ವತಂತ್ರವಾಗಿ ರೂಪಿಸಿಕೊಳ್ಳುತ್ತಿದ್ದಾರೆ. ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಅವರ ನಿರಂತರ ಪರಿಶ್ರಮ ಶ್ಲಾಘನೀಯ.



**–ಸರ್ದಾರ್ ಯಮನೂರಪ್ಪ,**
ಹಗರಿಬೊಮ್ಮನಹಳ್ಳಿ.

# ಸಾರ್ವಜನಿಕರ ಗಮನಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ವೃತ್ತಿಪರ ಮತ್ತು ವೃತ್ತಿ ಮಾರ್ಗದರ್ಶನ ಘಟಕವನ್ನು ಸ್ಥಾಪಿಸುವ ಕುರಿತು ಹೊರಡಿಸಲಾದ ಆದೇಶದ ಪ್ರಕಾರ, ತಾಲ್ಲೂಕು ಹಂತದ Career Counselorಗಳ ಆಯ್ಕೆ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ರದ್ದುಪಡಿಸಲಾಗಿದೆ. ಈ ಕುರಿತು ಮುಂದಿನ ಆದೇಶಗಳು ಹೊರಬಂದ ನಂತರ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿ.ಎಂ. ಮುಂದಿನಮನಿ, ಪ್ರಾಚಾರ್ಯರು, ಡಯಟ್ ಗದಗ, ಮೊಬೈಲ್ ಸಂಖ್ಯೆ: 9448999369 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಪ್ರಕಟಣೆ ತಿಳಿಸಿದೆ.

## ಈದ್ ಉಲ್ ಫಿತ್ರ್: ಉಪವಾಸದ ತ್ಯಾಗಕ್ಕೆ ಮಾನವೀಯ ಸಂಭ್ರಮದ ಕಿರೀಟ

# ರಂಜಾನ್ ನಮ್ಮನ್ನು ಶುದ್ಧಗೊಳಿಸುತ್ತದೆ; ಈದ್ ನಮ್ಮನ್ನು ಒಂದಾಗಿಸುತ್ತದೆ

ಒಂದು ತಿಂಗಳ ಪವಿತ್ರ ಉಪವಾಸದ ಬಳಿಕ ಬರುವ ಈದ್ ಉಲ್ ಫಿತ್ರ್ ಮನುಷ್ಯನ ಬದುಕಿನಲ್ಲಿ ಸಂತೋಷದ ಹೊಸ ಅಧ್ಯಾಯವನ್ನು ತೆರೆಯುತ್ತದೆ. ಇದು ಕೇವಲ ಹಬ್ಬವಲ್ಲ; ತ್ಯಾಗ, ಶಿಸ್ತು, ಆತ್ಮಶುದ್ಧಿ ಮತ್ತು ಮಾನವೀಯ ಮೌಲ್ಯಗಳ ಸಂಭ್ರಮವಾಗಿದೆ. ರಂಜಾನ್ ತಿಂಗಳಲ್ಲಿ ಹಸಿವು–ದಾಹವನ್ನು ಸಹಿಸಿಕೊಂಡು ಮನಸ್ಸನ್ನು ನಿಯಂತ್ರಿಸಿದ ವ್ಯಕ್ತಿ, ಈದ್ ದಿನ ತನ್ನ ಆತ್ಮಸಾಧನೆಯ ಫಲವನ್ನು ಅನುಭವಿಸುತ್ತಾನೆ.

ಈ ಹಬ್ಬದ ಇತಿಹಾಸವನ್ನು ಇಸ್ಲಾಮಿನ ಪ್ರಾರಂಭಿಕ ಕಾಲದಲ್ಲಿ ನೋಡಬಹುದು. ಪ್ರವಾದಿ ಮುಹಮ್ಮದ್ ಅವರ ಕಾಲದಲ್ಲಿ ಇದರ ಆಚರಣೆ ಆರಂಭವಾಯಿತು. ಪವಿತ್ರ ಕುರಾನ್ ರಂಜಾನ್ ತಿಂಗಳಲ್ಲಿ ಪ್ರಕಟವಾದ ಹಿನ್ನೆಲೆಯಲ್ಲಿ, ಈ ತಿಂಗಳು ಆತ್ಮಶುದ್ಧಿಯ ಕಾಲವಾಗಿ ಪರಿಗಣಿಸಲ್ಪಟ್ಟಿದೆ.




ಅದರ ಅಂತ್ಯದಲ್ಲಿ ಬರುವ ಈದ್, ಭಕ್ತರ ಸಾಧನೆಗೆ ಸಮ್ಮಾನ ನೀಡುವ ಹಬ್ಬವಾಗಿದೆ.

ರಂಜಾನ್ ಉಪವಾಸವು ಕೇವಲ ದೇಹದ ನಿಯಮವಲ್ಲ; ಅದು ಮನಸ್ಸಿನ ಶಿಸ್ತಿನ ಅಭ್ಯಾಸ. ಹಸಿವು, ದಾಹ, ಕೋಪವನ್ನು ನಿಯಂತ್ರಿಸುವ ಮೂಲಕ ಮನುಷ್ಯನು ತಾಳ್ಮೆ, ನಿಯಂತ್ರಣ ಮತ್ತು ಆತ್ಮವಿಶ್ವಾಸವನ್ನು ಕಲಿಯುತ್ತಾನೆ. ಈ ಗುಣಗಳು ಜೀವನದ ಎಲ್ಲಾ ಕ್ಷೇತ್ರಗಳಲ್ಲಿ ಉಪಯೋಗವಾಗುತ್ತವೆ.

ಈದ್‌ನ ಪ್ರಮುಖ ಅಂಶವೆಂದರೆ ಜಕಾತ್–ಉಲ್–ಫಿತ್ರ್. ಬಡವರಿಗೆ ಸಹಾಯ ಮಾಡುವ ಈ ಪದ್ಧತಿ, ಹಬ್ಬದ ಸಂತೋಷವನ್ನು ಎಲ್ಲರಿಗೂ ಹಂಚುತ್ತದೆ. ಇದು ಸಮಾನತೆ ಮತ್ತು ಸಹಾನುಭೂತಿಯ ಸಂಕೇತವಾಗಿದ್ದು, "ನಾನು ಮಾತ್ರವಲ್ಲ, ಎಲ್ಲರೂ ಸಂತೋಷವಾಗಿರಬೇಕು" ಎಂಬ ಸಂದೇಶವನ್ನು ನೀಡುತ್ತದೆ.

ಈದ್ ದಿನ ವಿಶೇಷ ನಮಾಝ್ ಸಲ್ಲಿಸಿ, ಬಂಧು–ಬಳಗದವರನ್ನು ಭೇಟಿ ಮಾಡಿ, ಹೊಸ ಬಟ್ಟೆ ಧರಿಸಿ, ಸಿಹಿ ತಿಂಡಿಗಳನ್ನು ಹಂಚಿಕೊಳ್ಳುವುದು ಆಚರಣೆಯ ಭಾಗ. ಆದರೆ ಇದರ ಒಳಗಿನ ಅರ್ಥ ಸರಳತೆಯಲ್ಲಿರುವ ಸಂತೋಷ ಮತ್ತು ಮಾನವೀಯತೆಯ ಮೌಲ್ಯಗಳಲ್ಲಿದೆ. ಇಂದಿನ ಯುಗದಲ್ಲಿ ಈದ್ ಆಚರಣೆಯಲ್ಲೂ ಬದಲಾವಣೆಗಳಿವೆ. ಸಾಮಾಜಿಕ ಮಾಧ್ಯಮಗಳ ಮೂಲಕ ಶುಭಾಶಯ ವಿನಿಮಯ, ಇಫ್ತಾರ್ ಕೂಟಗಳು ಹೆಚ್ಚಾಗಿವೆ. ಆದರೆ ಈ ಬದಲಾವಣೆಗಳ ನಡುವೆ ಮೂಲ ಮೌಲ್ಯಗಳನ್ನು ಕಾಪಾಡುವುದು ಅಗತ್ಯ.

ಈದ್ ಉಲ್ ಫಿತ್ರ್ ಧರ್ಮಗಳ ನಡುವೆ ಸೌಹಾರ್ದತೆಯನ್ನು ಬೆಳೆಸುವ ಹಬ್ಬ. ಇದು ಕ್ಷಮೆ, ಪ್ರೀತಿ ಮತ್ತು ಹೊಸ ಆರಂಭದ ಸಂಕೇತ. ಈ ಹಬ್ಬದ ಆತ್ಮವನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಂಡರೆ, ಉತ್ತಮ ಸಮಾಜ ನಿರ್ಮಾಣ ಸಾಧ್ಯ.



**– ಸಿಕಂದರ್ ಎಂ. ಆರಿ**

# ನಗರ ಸ್ವಚ್ಛತೆಗೆ ದುಡಿಯುವವರಿಗೆ ಆರೋಗ್ಯ ಕಾಳಜಿ ಅಗತ್ಯ: ಮರಿರಾಮಣ್ಣ




**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಪುರಸಭೆ ಹಾಗೂ ಆರೋಗ್ಯ ಇಲಾಖೆ ವತಿಯಿಂದ ಪೌರಕಾರ್ಮಿಕರ ಆರೋಗ್ಯದ ಕುರಿತು ಜಾಗೃತಿ ಮೂಡಿಸುವ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಮಾತನಾಡಿದ ಆರೋಗ್ಯ ಅಧಿಕಾರ ಡಾ.ಪ್ರವೀಣ್ ಕುಮಾರ್ ರವರು ಪೌರಕಾರ್ಮಿಕರಿಗೆ ಸ್ವಚ್ಛತೆ, ವೈಯಕ್ತಿಕ ಆರೋಗ್ಯ ಕಾಳಜಿ, ರೋಗ ನಿರೋಧಕ ಕ್ರಮಗಳು ಮತ್ತು ಸುರಕ್ಷತಾ ಉಪಕರಣಗಳ ಮಹತ್ವದ ಬಗ್ಗೆ ವಿವರವಾಗಿ ತಿಳಿಸಲಾಯಿತು. ಆರೋಗ್ಯ ಇಲಾಖೆ ಅಧಿಕಾರಿಗಳಾದ ಶ್ರೀಕಾಂತ್ ಅವರು, ಕಾರ್ಮಿಕರು ದಿನನಿತ್ಯ ಎದುರಿಸುವ ಆರೋಗ್ಯ ಸಮಸ್ಯೆಗಳು ಹಾಗೂ ಅವುಗಳನ್ನು ತಡೆಯುವ ವಿಧಾನಗಳ ಬಗ್ಗೆ ಪ್ರಾಯೋಗಿಕ ಮಾಹಿತಿ ನೀಡಿದರು.

ಪುರಸಭೆ ಮುಖ್ಯ ಅಧಿಕಾರಿಗಳಾದ ಮುಗಳಿಯವರು ಮಾತನಾಡಿ, ಪೌರಕಾರ್ಮಿಕರು ನಗರದ ಸ್ವಚ್ಛತೆಗಾಗಿ ಮಹತ್ವದ ಸೇವೆ ಸಲ್ಲಿಸುತ್ತಿದ್ದಾರೆ. ಅವರ ಆರೋಗ್ಯ ಕಾಪಾಡುವುದು ನಮ್ಮ ಎಲ್ಲರ ಜವಾಬ್ದಾರಿ ಎಂದು ಹೇಳಿದರು,

ಜೊತೆಗೆ, ಕೈಗವಸು, ಮಾಸ್ಕ್, ಶೂಗಳು ಸೇರಿದಂತೆ ಅಗತ್ಯ ಸುರಕ್ಷತಾ ಉಪಕರಣಗಳನ್ನು ಬಳಸುವಂತೆ ಸೂಚಿಸಿದರು. ಪುರಸಭೆ ಅಧ್ಯಕ್ಷರಾದ ಮರಿರಾಮಣ್ಣನವರು ಮಾತನಾಡಿ, ಪೌರಕಾರ್ಮಿಕರಾಗಿ ಕಾರ್ಯನಿರ್ವಹಿಸುತ್ತಿರುವವರ ಆರೋಗ್ಯ ಸುರಕ್ಷತೆ ನಮ್ಮಗಳ ಜವಾಬ್ದಾರಿಯಾಗಬೇಕು ಅದರಂತೆ ಪೌರಕಾರ್ಮಿಕರು ಸುರಕ್ಷಿತ ಕವಚಗಳನ್ನ ಬಳಸಿಕೊಂಡು ಸುರಕ್ಷಿತ ಮಾರ್ಗವಾಗಿ ಸ್ವಚ್ಛತೆಯನ್ನ ಮಾಡಬೇಕು ಆರೋಗ್ಯದ ಬಗ್ಗೆ ಹೆಚ್ಚಿನ ಗಮನವನ್ನು ವಹಿಸಬೇಕು ಮತ್ತು ಸರ್ಕಾರದಿಂದ ವಿಶೇಷವಾಗಿ ಅವರಿಗೆ ಸೌಲಭ್ಯಗಳನ್ನು ಸ್ವದುಪಯೋಗಪಡಿಸಿಕೊಳ್ಳಬೇಕು ಅದರ ಭಾಗವಾಗಿ ಪುರಸಭೆ ಅನುದಾನದಲ್ಲಿ ಮತ್ತು ಎಸ್ಸಿಪಿಟಿಎಸ್‌ಪಿ ಅನುದಾನದಲ್ಲಿ ವಿಶೇಷವಾಗಿ ಆರೋಗ್ಯ ತಪಾಸಣಾ ಶಿಬಿರಗಳನ್ನು ಆಯೋಜಿಸಿದ್ದು ಇದು ನಮ್ಮಗಳ ಜವಾಬ್ದಾರಿಯಾಗಿದೆ ಎಂದರು,

ಕಾರ್ಯಕ್ರಮದ ಅಂಗವಾಗಿ ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆ ಸಹ ನಡೆಸಲಾಯಿತು. ರಕ್ತದ ಒತ್ತಡ, ಶುಗರ್ ಪರೀಕ್ಷೆ ಸೇರಿದಂತೆ ವಿವಿಧ ಪರೀಕ್ಷೆಗಳನ್ನು ಮಾಡಿ ವೈದ್ಯರು ಸಲಹೆ ನೀಡಿದರು.

ಈ ಜಾಗೃತಿ ಕಾರ್ಯಕ್ರಮದಿಂದ ಪೌರಕಾರ್ಮಿಕರಲ್ಲಿ ಆರೋಗ್ಯದ ಬಗ್ಗೆ ಅರಿವು ಹೆಚ್ಚಿದ್ದು, ಇಂತಹ ಕಾರ್ಯಕ್ರಮಗಳನ್ನು ಮುಂದುವರಿಸುವಂತೆ ಅವರು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಮುಖಂಡರಾದ ಸೆರಗಾರ ಹುಚ್ಚಪ್ಪ ಹಾಗೂ ಸಿಖಂದರ್ ಪುರಸಭೆ ಆರೋಗ್ಯ ಅಧಿಕಾರಿಗಳಾದ ವಿಜಯಲಕ್ಷ್ಮಿ ಪೌರಕಾರ್ಮಿಕರ ಸಂಘಟನೆಯ ರಾಜ್ಯಾಧ್ಯಕ್ಷರಾದ ಪ್ರಭಾಕರ್, ಮೇಸ್ತ್ರಿ ಈರಣ್ಣ, ಸೇರಿದಂತೆ ಸದಸ್ಯರು, ಆರೋಗ್ಯ ಇಲಾಖೆ ಸಿಬ್ಬಂದಿ ಹಾಗೂ ಪೌರಕಾರ್ಮಿಕರು ಉಪಸ್ಥಿತರಿದ್ದರು.

## ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ



■ವಿಜಯಸಾಕ್ಷಿ ಸುದ್ದಿ, ಡಂಬಳ

ಡಂಬಳ ಹೋಬಳಿಯ ಮೇವುಂಡಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಎದುರಿಸುತ್ತಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ತೇಜಸ್ವಿ ಸೂರ್ಯ ಅಭಿಮಾನಿ ಬಳಗದ ವತಿಯಿಂದ ಉಚಿತ ಕ್ಲಿಪ್‌ಬೋರ್ಡ್ ಹಾಗೂ ಪೆನ್ನುಗಳನ್ನು ವಿತರಿಸಲಾಯಿತು.

ಈ ಕಾರ್ಯಕ್ರಮದಲ್ಲಿ ತೇಜಸ್ವಿ ಸೂರ್ಯ ಅಭಿಮಾನಿ ಬಳಗದ ರಾಜ್ಯಾಧ್ಯಕ್ಷ ಪವನ ಮೇಟಿ ಭಾಗವಹಿಸಿ, ವಿದ್ಯಾರ್ಥಿಗಳಿಗೆ ಅಗತ್ಯ ಸಾಮಗ್ರಿ ವಿತರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಪರೀಕ್ಷೆಯ ಬಗ್ಗೆ ವಿದ್ಯಾರ್ಥಿಗಳು ಅನಗತ್ಯ ಆತಂಕಕ್ಕೆ ಒಳಗಾಗಬಾರದು ಎಂದು ಸಲಹೆ ನೀಡಿದರು. "ನಾನು ಚೆನ್ನಾಗಿ ಓದಿದ್ದೇನೆ ಎಂಬ ಆತ್ಮವಿಶ್ವಾಸದೊಂದಿಗೆ, ಸಂತೋಷದಿಂದ ಪರೀಕ್ಷೆ ಎದುರಿಸಿದರೆ ಉತ್ತಮ ಫಲಿತಾಂಶ ಸಾಧ್ಯ" ಎಂದು ಹೇಳಿದರು.

ಇದೇ ವೇಳೆ "ಪರೀಕ್ಷೆಗೆ ಕಷ್ಟಪಟ್ಟು ಓದಿ ಎಂದು ಎಲ್ಲರೂ ಹೇಳುತ್ತಾರೆ. ಆದರೆ ಇಷ್ಟಪಟ್ಟು ಓದಬೇಕು ಎಂಬ ಮನೋಭಾವ ಬೆಳೆಸಿಕೊಳ್ಳುವುದು ಅತ್ಯಂತ ಮುಖ್ಯ. ಆತ್ಮವಿಶ್ವಾಸವೇ ಯಶಸ್ಸಿನ ಮೂಲ" ಎಂದು ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಸಂದೇಶ ನೀಡಿದರು. ವಿದ್ಯಾರ್ಥಿಗಳು ಉತ್ತಮ ಅಂಕಗಳನ್ನು ಪಡೆದು ಶಾಲೆ ಹಾಗೂ ತಾಲ್ಲೂಕಿಗೆ ಕೀರ್ತಿ ತರಬೇಕು ಎಂದು ಅವರು ಆಶಿಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಮುಖಂಡರಾದ ರವಿ ಕರಿಗಾರ, ಡಂಬಳ ಮಂಡಳ ಅಧ್ಯಕ್ಷ ಅಂದಪ್ಪ ಹಾರೂಗೇರಿ, ಎಸ್‌ಡಿಎಂಸಿ ಅಧ್ಯಕ್ಷ ಶಿವಪುತ್ರಪ್ಪ ಹಂದ್ರಾಳ, ಹಾಲೇಶ ಕವಲೂರ, ತಿಪ್ಪಣ್ಣ ಕೊರ್ಲಹಳ್ಳಿ, ರಮೇಶ್ ಕರಿಗಾರ, ಮಂಜುನಾಥ ಕೊರ್ಲಹಳ್ಳಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಮಹಿಳಾ ದಿನಾಚರಣೆ ಹಾಗೂ ಕೈಗಾರಿಕಾ ಪ್ರದರ್ಶನದಲ್ಲಿ ಉಮಾ ರೆಡ್ಡಿ ಅಭಿಮತ

## ಮಹಿಳೆ ಉದ್ಯಮ ಕ್ಷೇತ್ರದಲ್ಲಿದ್ದಾಗ ಮಾತ್ರ ಸಮಾಜದಲ್ಲಿ ಗುರುತಿಸಿಕೊಳ್ಳಲು ಸಾಧ್ಯ



■ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ಮಹಿಳೆಯರು ಪುರುಷರಷ್ಟೇ ಸಮಾನವಾಗಿ ಎಲ್ಲ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದಾರೆ. ಮಹಿಳೆಯರು ಉದ್ಯಮ ಕ್ಷೇತ್ರದಲ್ಲಿ ತೊಡಗಿ–ಕೊಂಡಾಗ ಮಾತ್ರ ಸಮಾಜದಲ್ಲಿ ಗುರುತಿಸಿಕೊಳ್ಳಲು ಸಾಧ್ಯ. ಪ್ರತಿಯೊಬ್ಬ ಮಹಿಳೆಯಲ್ಲೂ ಕೌಶಲ್ಯ ಇದೆ, ಅದನ್ನು ಸಮರ್ಪಕವಾಗಿ ಬಳಸಿದರೆ ಹಲವರಿಗೆ ಉದ್ಯೋಗ ಸೃಷ್ಟಿಸಬಹುದು ಎಂದು ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾ ಸಂಸ್ಥೆಯ ಅಧ್ಯಕ್ಷೆ ಉಮಾ ರೆಡ್ಡಿ ಹೇಳಿದರು.

ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಮಹಿಳಾ ಕೈಗಾರಿಕಾ ವಸ್ತು ಪ್ರದರ್ಶನ–2026 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಮಕ್ಕಳ ಸಂರಕ್ಷಣಾಧಿಕಾರಿ ಶ್ರೀಮತಿ ರಾಜೇಶ್ವರಿ ಮೇಟಿ, "ಮಹಿಳೆಯರು ಮಕ್ಕಳ ಬಗ್ಗೆ ಜಾಗೃತಿ ವಹಿಸುವುದು ಮತ್ತು ಮಾನಸಿಕ–ಆರ್ಥಿಕವಾಗಿ ಸಬಲರಾಗುವುದು ಮುಖ್ಯ. ತಂತ್ರಜ್ಞಾನ ಬೆಳವಣಿಗೆಯಿಂದ ಆನ್‌ಲೈನ್ ವ್ಯಾಪಾರ ಮಹಿಳೆಯರಿಗೆ ಹೊಸ ಅವಕಾಶಗಳನ್ನು ತೆರೆದಿದೆ. ಮಹಿಳೆಯರ ಸುರಕ್ಷತೆಗಾಗಿ ಸರ್ಕಾರ ಕ್ರಮ ಕೈಗೊಂಡಿದ್ದು, ತುರ್ತು ಸಂದರ್ಭಗಳಲ್ಲಿ 112ಗೆ ಕರೆ ಮಾಡಿದರೆ ತಕ್ಷಣ ಸಹಾಯ ಲಭ್ಯ" ಎಂದು ತಿಳಿಸಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಮಾತನಾಡಿ, "ಮಹಿಳೆಯರು ಮನೆ ಹಾಗೂ ವ್ಯವಹಾರವನ್ನು ಸಮರ್ಥವಾಗಿ ನಿರ್ವಹಿಸಿದಾಗ ಯಶಸ್ಸು ಸಾಧ್ಯ. ಇಂದಿನ ಮಹಿಳೆಯರು ಉನ್ನತ ಸ್ಥಾನಗಳಲ್ಲಿ ಬೆಳೆಯುತ್ತಿರುವುದು ಹೆಮ್ಮೆಯ ಸಂಗತಿ" ಎಂದು ಹೇಳಿದರು.

> "ಮಹಿಳೆ ಅಬಲೇ ಅಲ್ಲ, ಸಬಲೇ. ಇಂದಿನ ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿದ್ದಾರೆ. ಜ್ಞಾನ, ಓದು, ಯೋಗ ಹಾಗೂ ಪರಿಶ್ರಮದಿಂದ ಯಶಸ್ಸು ಸಾಧಿಸಬಹುದು"
>
> **–ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು,**
> ಶಿರಹಟ್ಟಿ ಬಾವ್ಯಕ್ಯತೆ ಮಹಾಸಂಸ್ಥಾನ ಮಠ.

ಮಹಿಳಾ ಘಟಕದ ಅಧ್ಯಕ್ಷೆ ಜ್ಯೋತಿ ರಾಮನಗೌಡ ದಾನಪ್ಪಗೌಡ್ರ ಮಾತನಾಡಿ, "2019ರಲ್ಲಿ ಆರಂಭವಾದ ಘಟಕವು ಇಂದು ಐದನೇ ವರ್ಷಕ್ಕೆ ಕಾಲಿಟ್ಟಿದೆ. ಮಹಿಳೆಯರಿಗೆ ಕಾರ್ಯಾಗಾರಗಳು, ಜಾಗೃತಿ ಕಾರ್ಯಕ್ರಮಗಳು ಮತ್ತು ಮಾರುಕಟ್ಟೆ ಸಂಪರ್ಕ ಕಲ್ಪಿಸುವ ಕಾರ್ಯವನ್ನು ನಿರಂತರವಾಗಿ ಮಾಡುತ್ತಿದ್ದೇವೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಯಶಸ್ವಿ ಮಹಿಳಾ ಉದ್ಯಮಿಗಳಾದ ಸುವರ್ಣ ಎಸ್. ಮದರಿಮಠ (ಸಹನಾ ಟ್ರೇಡರ್ಸ್) ಹಾಗೂ ಸುನಿತಾ ಕೆ. ಪಾಟೀಲ (ಓಂಕಾರ ಅಸೋಸಿಯೇಟ್ಸ್) ಅವರನ್ನು ಸನ್ಮಾನಿಸಲಾಯಿತು.

## ಗೋಸಂಪತ್ತು-ಸಾವಯವ ಕೃಷಿ ಕೈಬಿಟ್ಟರೆ ರೈತರಿಗೆ ಭವಿಷ್ಯವೇ ಇಲ್ಲ!




■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಹೆಚ್ಚು ಇಳುವರಿ ಪಡೆಯುವ ಉದ್ದೇಶದಿಂದ ಆಧುನಿಕ ಕೃಷಿಯತ್ತ ಅತಿಯಾದ ಒಲವು ತೋರಿ, ಗೋಸಂಪತ್ತು ಹಾಗೂ ಸಾವಯವ ಕೃಷಿಯನ್ನು ನಿರ್ಲಕ್ಷಿಸಿದರೆ ಮುಂದಿನ ದಿನಗಳಲ್ಲಿ ರೈತರಿಗೆ ಉಳಿಗಾಲವೇ ಇರುವುದಿಲ್ಲ ಎಂದು ಕೃಷಿ ವಿಜ್ಞಾನಿ ಡಾ. ಚಂದ್ರಕಾಂತ ಕಾಲಿಬಾವಿ ಎಚ್ಚರಿಸಿದರು.

ತಾಲೂಕಿನ ತಂಬ್ರಹಳ್ಳಿ ರೈತ ಸಂಪರ್ಕ ಕೇಂದ್ರದ ವತಿಯಿಂದ ಆಯೋಜಿಸಲಾದ "ಸಾವಯವ ಕೃಷಿಯಲ್ಲಿ ರಾಗಿ, ಸಿರಿಧಾನ್ಯ ಹಾಗೂ ಎಣ್ಣೆಕಾಳು ಬೆಳೆಗಳ ಬೆಳವಣಿಗೆ" ಕುರಿತ ಒಂದು ದಿನದ ಕಾರ್ಯಾಗಾರದಲ್ಲಿ ಉಪನ್ಯಾಸ ನೀಡಿದ ಅವರು, ಪರಿಸರ ಸಂರಕ್ಷಣೆ ಅತ್ಯಾವಶ್ಯಕವಾಗಿದ್ದು, ಪರಿಸರವನ್ನು ಉಳಿಸಿದಾಗ ಮಾತ್ರ ಅದು ಮಾನವಕುಲವನ್ನು ಕಾಪಾಡುತ್ತದೆ ಎಂದು ಹೇಳಿದರು. ಮುಂದಿನ ದಿನಗಳಲ್ಲಿ ಪರಿಶುದ್ಧ ಗಾಳಿಗೂ ಸಂಕಷ್ಟ ಎದುರಾಗುವ ಸಾಧ್ಯತೆ ಇದೆ ಎಂದು ಆತಂಕ ವ್ಯಕ್ತಪಡಿಸಿದರು.

ರೈತರಿಗೆ ಶಾಶ್ವತ ಆಸರೆಯಾಗುವ ಮಾವು, ಹುಣಸೆ, ಬೇವು, ತೇ–ಗ, ಹಬ್ಬೇವು, ಬಾರೆ ಮುಂತಾದ ಮರಗಳನ್ನು ಹೊಲದ ಸುತ್ತಲೂ ಬೇಲಿಯಾಗಿ ಬೆಳೆಸಿದರೆ ಆರ್ಥಿಕ ಹಾಗೂ ಪರಿಸರದ ದೃಷ್ಟಿಯಿಂದ ಬಹು ಪ್ರಯೋಜನಕಾರಿಯಾಗುತ್ತದೆ ಎಂದು ತಿಳಿಸಿದರು.

ಇತ್ತೀಚಿನ ಹವಾಮಾನ ವೈಪರೀತ್ಯಗಳಿಂದ ಬೆಳೆ ನಷ್ಟ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ, ರೈತರು ಕೃಷಿಯ ಜೊತೆಗೆ ರೇಷ್ಮೆ, ಕುರಿ, ಕೋಳಿ ಸಾಕಣೆ, ಹೈನುಗಾರಿಕೆ ಸೇರಿದಂತೆ ಸಮಗ್ರ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳುವುದು ಅನಿವಾರ್ಯ ಎಂದು ಹೇಳಿದರು.

ಬೆಳೆ ಪರಿವರ್ತನೆ (ಕ್ರಾಪ್ ರೋಟೇಶನ್) ಮೂಲಕ ಮಣ್ಣಿನ ಫಲವತ್ತತೆ ಕಾಪಾಡಿಕೊಳ್ಳಬೇಕು. ಪ್ರತಿ ವರ್ಷ ಮಣ್ಣಿನ ಪರೀಕ್ಷೆ ಮಾಡಿಸಿ, ಪ್ರತಿ ಎಕರೆಗೆ ಕನಿಷ್ಠ ಎರಡು ಟನ್ ತಿಪ್ಪೆಗೊಬ್ಬರ ಬಳಕೆ ಮಾಡಬೇಕು. ಕೋಳಿಗೊಬ್ಬರ ಹಾಗೂ ಸಿಟಿ ಕಾಂಪೋಸ್ಟ್‌ಗಳನ್ನು ಸಮರ್ಪಕವಾಗಿ ಉಪಯೋಗಿಸಿದರೆ ಮಣ್ಣಿನ ಆರೋಗ್ಯ ಉತ್ತಮವಾಗುತ್ತದೆ ಎಂದು ಸಲಹೆ ನೀಡಿದರು. ಬಿತ್ತನೆ ವೇಳೆ ಬೀಜೋಪಚಾರ ಕೈಗೊಂಡರೆ ಯೂರಿಯಾ ಬಳಕೆಯನ್ನು ಶೇಕಡಾ 20-25 ರಷ್ಟು ಕಡಿಮೆ ಮಾಡಬಹುದು ಎಂದು ವಿವರಿಸಿದರು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಬಣಕಾರ ಕೊಟ್ರೇಶ್ ಮಾತನಾಡಿ, ರೈತರಿಗೆ ಮಾರ್ಗದರ್ಶನ ನೀಡುವ ಇಂತಹ ಉಪಯುಕ್ತ ಕಾರ್ಯಕ್ರಮಗಳು ನಿರಂತರವಾಗಿ ನಡೆಯಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕೃಷಿಕ ಸಮಾಜದ ಸದಸ್ಯ ಕಿನ್ನಾಳ ಸುರೇಶ್, ರೈತ ಸಂಘದ ಗಡ್ಡಿ ನಿಂಗಪ್ಪ, ಕೃಷಿ ಇಲಾಖೆ ಅಧಿಕಾರಿ ಇ. ಶಶಿಕುಮಾರ್ ಸೇರಿದಂತೆ ಸಿಬ್ಬಂದಿ ಹಾಗೂ ಸುತ್ತಮುತ್ತಲಿನ ಅನೇಕ ರೈತರು ಭಾಗವಹಿಸಿದ್ದರು.

## ಹೋಟೆಲ್ ಉದ್ಯಮಕ್ಕೆ ಗ್ಯಾಸ್ ಸಂಕಷ್ಟ: ಜಿಲ್ಲಾಧಿಕಾರಿಗಳಿಗೆ ಒಡೆಯರ ಸಂಘ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಅವಳಿ ನಗರದಲ್ಲಿನ ಹೋಟೆಲ್‌ಗಳಲ್ಲಿ ಗ್ಯಾಸ್ ಸಿಲಿಂಡರ್ ಕೊರತೆ ತೀವ್ರಗೊಂಡಿದ್ದು, ದಿನನಿತ್ಯದ ವ್ಯವಹಾರಕ್ಕೆ ಅಡಚಣೆ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ಸಮಸ್ಯೆಗೆ ತಕ್ಷಣ ಪರಿಹಾರ ಕಲ್ಪಿಸುವಂತೆ ಹೋಟೆಲ್ ಒಡೆಯರ ಸಂಘ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದೆ.

ಸಂಘದ ಜಿಲ್ಲಾಧ್ಯಕ್ಷ ಎಚ್. ವಿಶ್ವನಾಥ ಶೆಟ್ಟಿ ಮಾತನಾಡಿ, "ಗ್ಯಾಸ್ ಕೊರತೆಯಿಂದಾಗಿ ಹೋಟೆಲ್‌ಗಳಲ್ಲಿ ತಿಂಡಿ ತಯಾರಿಕೆಗೆ ತೊಂದರೆಯಾಗುತ್ತಿದೆ. ಕೆಲ ಪದಾರ್ಥಗಳನ್ನು ಕಡಿತಗೊಳಿಸಿ ಉಳಿದ ಗ್ಯಾಸ್‌ನ್ನು ಬಳಕೆ ಮಾಡುತ್ತಿದ್ದೇವೆ. ಆದರೂ ಸಮಸ್ಯೆ ದಿನದಿಂದ ದಿನಕ್ಕೆ ಗಂಭೀರವಾಗುತ್ತಿದೆ" ಎಂದು ಹೇಳಿದರು. ಈ ಪರಿಸ್ಥಿತಿ ಮುಂದುವರೆದರೆ ಹೋಟೆಲ್‌ಗಳನ್ನು ಬಂದ್ ಮಾಡುವ ಪರಿಸ್ಥಿತಿ ಎದುರಾಗಬಹುದು. ಜೊತೆಗೆ ಕಾರ್ಮಿಕರ ಉದ್ಯೋಗಕ್ಕೂ ಧಕ್ಕೆ ಉಂಟಾಗುವ ಭೀತಿ ಇದೆ ಎಂದು ಆತಂಕ ವ್ಯಕ್ತಪಡಿಸಿದರು. ಹೀಗಾಗಿ ತಕ್ಷಣ ಹೆಚ್ಚುವರಿ ಗ್ಯಾಸ್ ಸಿಲಿಂಡರ್‌ಗಳನ್ನು ಸರಬರಾಜು ಮಾಡುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಬೇಕೆಂದು ಸಂಘ ಆಗ್ರಹಿಸಿದೆ.





ಲಕ್ಷ್ಮೇಶ್ವರ : ಸಮೀಪದ ಅಡರಕಟ್ಟಿ ಗ್ರಾಮದಲ್ಲಿ ಯುಗಾದಿ ಪಾಡ್ಯದಂದು ಗ್ರಾಮದ ಆರಾಧ್ಯ ದೈವ ಶ್ರೀ ಬಸವೇಶ್ವರ ದೇವರ ಜಾತ್ರಾ ಮಹೋತ್ಸವ ಅಪಾರ ಭಕ್ತ ಸಮೂಹದ ನಡುವೆ ಅದ್ದೂರಿಯಾಗಿ ರಥೋತ್ಸವ ಮತ್ತು ಶುಕ್ರವಾರ ಕಡುಬಿನ ಕಾಳಗ ನೆರವೇರಿತು.

ಸಾವಿರಾರು ಭಕ್ತರ ಜಯಘೋಷದ ಮದ್ಯೆ ರಥೋತ್ಸವವವು ವೈಭವದಿಂದ ನಡೆಯಿತು.

## "ನಂಬಿಕೆ, ನಿರಂತರ ಪ್ರಯತ್ನವೇ ಯಶಸ್ಸಿನ ಮಂತ್ರ"





■ವಿಜಯಸಾಕ್ಷಿ ಸುದ್ದಿ, ಗದಗ

"ಜೀವನದಲ್ಲಿ ಸವಾಲುಗಳು ಎದುರಾದಾಗ ಹಿಂತಿರುಗಿ ನೋಡುವುದಕ್ಕಿಂತ ಮುಂದೆ ಸಾಗುವ ಧೈರ್ಯ ಹೊಂದಬೇಕು. ಪರಿಶ್ರಮ ಮತ್ತು ದೃಢ ಸಂಕಲ್ಪ ಇದ್ದರೆ ಯಾವುದೇ ಗುರಿಯನ್ನು ಸಾಧಿಸಬಹುದು" ಎಂದು ಮಾಲತಿ ಇನಾಮತಿ ಹೇಳಿದರು.

ನಗರದ ಪ್ರತಿಷ್ಠಿತ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನಲ್ಲಿ ನಡೆದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ಅವರು, ಐಟಿ ಕ್ಷೇತ್ರದಿಂದ ಕ್ರೀಡಾ ಕ್ಷೇತ್ರಕ್ಕೆ ಬಂದಿರುವುದು ನನ್ನ ಜೀವನದ ಮಹತ್ವದ ತಿರುವು. ಆದರೆ ನಂಬಿಕೆ ಮತ್ತು ನಿರಂತರ ಪ್ರಯತ್ನವೇ ನನ್ನ ಯಶಸ್ಸಿನ ಮೂಲ. ವಿದ್ಯಾರ್ಥಿಗಳು ತಮ್ಮ ಸಾಮರ್ಥ್ಯದ ಮೇಲೆ ನಂಬಿಕೆ ಇಟ್ಟು, ಅವಕಾಶಗಳನ್ನು ಬಳಸಿಕೊಂಡು ಕನಸುಗಳನ್ನು ಸಾಧಿಸಲು ಸದಾ ಪ್ರಯತ್ನಿಸಬೇಕು ಎಂದರು. ಉಪಪ್ರಾಂಶುಪಾಲರಾದ ಡಾ. ಜಿ.ಡಿ. ರೇವಣಕರ್ ಮಾತನಾಡಿ, ಮಹಿಳೆಯರ ಸಾಮಾಜಿಕ ಹಾಗೂ ವೃತ್ತಿಜೀವನದಲ್ಲಿ ಸಂಭವಿಸಿದ ಪ್ರಗತಿಯನ್ನು ವಿವರಿಸಿ, ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ತಮ್ಮ ಗುರಿಗಳನ್ನು ಸಾಧಿಸಬೇಕು ಎಂದು ಕರೆ ನೀಡಿದರು.

ವಿಜ್ಞಾನ ವಿಭಾಗದ ಸಹ ಪ್ರಾಧ್ಯಾಪಕಿ ಡಾ. ಜಯಶ್ರೀ ರೆಡ್ಡೇರ್, ಮಹಿಳೆಯರು ಶಿಕ್ಷಣ, ಪರಿಶ್ರಮ ಮತ್ತು ಆತ್ಮವಿಶ್ವಾಸದ ಮೂಲಕ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡುತ್ತಿರುವುದನ್ನು ಉಲ್ಲೇಖಿಸಿ, ಸಮಾಜ ನಿರ್ಮಾಣದಲ್ಲಿ ಅವರ ಪಾತ್ರವನ್ನು ವಿವರಿಸಿದರು.

ಕಾರ್ಯಕ್ರಮವನ್ನು ಇಸಿಇ ವಿಭಾಗದ ವಿದ್ಯಾರ್ಥಿನಿ ಸಹನಾ ಬ್ಯಾಹಟ್ಟಿ ನಿರೂಪಿಸಿದ್ದು, ಜ್ಯೋತಿಕಾ ಜಿ.ಎಸ್. ವಂದನಾರ್ಪಣೆ ಸಲ್ಲಿಸಿದರು. ಕಾಲೇಜಿನ ಮಹಿಳಾ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.



ಲಕ್ಷ್ಮೇಶ್ವರ: ಯುಗಾದಿ ಹೊಸವರ್ಷದ ಪ್ರಯುಕ್ತ ತಾಲೂಕ ಪಕ್ಷಾತೀತ ರೈತಪರ ಹೋರಾಟ ವೇದಿಕೆ ಅಧ್ಯಕ್ಷ ಅವರ ನೇತೃತ್ವದಲ್ಲಿ ಪಟ್ಟಣದ ವಿವಿಧ ದೇವಸ್ಥಾನಗಳಿಗೆ ತೆರಳಿ ಜನರಿಗೆ ಪರಸ್ಪರ ಬೇವು ಬೆಲ್ಲವನ್ನು ಹಂಚಿಕೊಂಡು ಶುಭ ಕೋರಲಾಯಿತು. ತಾಲೂಕ ಪಕ್ಷಾತೀತ ಹೋರಾಟ ವೇದಿಕೆ ಅಧ್ಯಕ್ಷ ಮಹೇಶ ಹೊಗೆಸೊಪ್ಪಿನ, ಮುರುಗೇಂದ್ರಯ್ಯ ಹಿರೇಮಠ, ಕಿರಣ ನವಲೆ, ಗಂಗಾಧರ ಮ್ಯಾಗೇರಿ, ಶಿವಣ್ಣ ಲಿಂಗಶೆಟ್ಟಿ, ರಾಜು ಗುಡಗೇರಿ, ಲಕ್ಷ್ಮಣ ನಾವಿ ಸೇರಿದಂತೆ ಅನೇಕರಿದ್ದರು.

## ಮಹಿಳೆಯರು ಸಾಮಾಜಿಕ, ರಾಜಕೀಯ ಕ್ಷೇತ್ರದಲ್ಲಿ ಹೆಸರು ಮಾಡಬೇಕು



■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆಯರು ಸಾಮಾಜಿಕ, ರಾಜಕೀಯ ಮತ್ತು ವೃತ್ತಿಪರ ಕ್ಷೇತ್ರಗಳಲ್ಲಿ ಯಶಸ್ವಿಯಾಗಿ ತೊಡಗಿಕೊಳ್ಳುತ್ತಿದ್ದು, ಜಿಲ್ಲೆಯಲ್ಲಿ ಮಹಿಳೆಯರು ಪ್ರಭಾವ ಬೀರುವಂತೆ ಕೆಲಸ ಮಾಡಬೇಕು ಎಂದು ನಿರ್ಮಲಾ ಕೊಳ್ಳಿ ಹೇಳಿದರು.

> "ಕಾಂಗ್ರೆಸ್ ಸರ್ಕಾರವು ಆರ್ಥಿಕವಾಗಿ ದಿವಾಳಿಯಾಗಿದ್ದು, ಜನರ ಮೇಲೆ ಸಾಲದ ಹೊರೆ ಹೊರಿಸಿದೆ. ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಮಹಿಳೆಯರಿಗೂ ರಾಜ್ಯ ಸರ್ಕಾರ ನಷ್ಟವನ್ನುಂಟು ಮಾಡುತ್ತಿದೆ. ರಾಜ್ಯ ಸರ್ಕಾರದ ದುರಾಡಳಿತದಿಂದ ಜನರು ಬೇಸತ್ತಿದ್ದಾರೆ. ಗ್ಯಾರಂಟಿ ಆಮಿಷಗಳಿಗೆ ಮಹಿಳೆಯರು ಮಾರು ಹೋಗಬಾರದು"
>
> – ಸಿ. **ಮಂಜುಳಾ.** ಕರ್ನಾಟಕ ರಾಜ್ಯ ಮಹಿಳಾ ಮೋರ್ಚದ ಅಧ್ಯಕ್ಷೆ

ನಗರದಲ್ಲಿ ಭಾರತೀಯ ಜನತಾ ಪಕ್ಷ ಗದಗ ಜಿಲ್ಲಾ ಘಟಕದ ವತಿಯಿಂದ ಆಯೋಜಿಸಲಾಗಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು. ಜಿಲ್ಲೆಯಲ್ಲಿ ಮಹಿಳೆಯರು ಸಾಮಾಜಿಕ ಮತ್ತು ರಾಜಕೀಯ ಕ್ಷೇತ್ರದಲ್ಲಿ ಹೆಸರು ಮಾಡಬೇಕು ಎಂದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮಾಜಿ ಸಚಿವ ಕಳಕಪ್ಪ ಜಿ ಬಂಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವು ಗ್ಯಾರಂಟಿ ಯೋಜನೆಗಳನ್ನು ಕೇವಲ ತಾತ್ಕಾಲಿಕವಾಗಿ ನಡೆಸುತ್ತಿದೆ. ಇಡೀ ಭಾರತದ ಅಭಿವೃದ್ಧಿಗೆ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದ ಕೇಂದ್ರ ಸರ್ಕಾರ ನೀಡುತ್ತಿರುವ ಗ್ಯಾರಂಟಿ ಶಾಶ್ವತವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ರಾಜ್ಯ ಹಾಗೂ ಅಂತರರಾಜ್ಯ ಮಹಿಳಾ ಕ್ರೀಡಾಪಟುಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಡಾ. ಶೋಭಾ ನಿಸ್ಸಿಮ್ ಗೌಡ್ರ, ಜಯಂತಿ ಅಕ್ಕ, ಶ್ರೀಮತಿ ಉಷಾ ದಾಸರ, ಶ್ರೀಮತಿ ಸುನಂದ ಬಾಕಳೆ, ಶ್ರೀಮತಿ ವಿಜಯಲಕ್ಷ್ಮಿ ದಿಂಡೂರು ಮತ್ತಿತರ ಹಿರಿಯ ಮುಖಂಡರು, ಯುವ ಮಹಿಳಾ ನಾಯಕರು ಮತ್ತು ಮಹಿಳಾ ಕಾರ್ಯಕರ್ತರು ಹಾಜರಿದ್ದರು.

### ಮಾನವೀಯತೆಯೇ ಎಲ್ಲ ಧರ್ಮಗಳ ಮೂಲ ಸಂದೇಶ: ಶಿವಕುಮಾರ ಶ್ರೀ

## ಕಪ್ಪತ್ತಗುಡ್ಡ ನಂದಿವೇರಿ ಮಠದಲ್ಲಿ ಸೌಹಾರ್ದ ಇಫ್ತಿಯಾರ್ ಕೂಟ!



■ವಿಜಯಸಾಕ್ಷಿ ಸುದ್ದಿ, ಡಂಬಳ

ರಂಜಾನ್ ಪವಿತ್ರ ಮಾಸದ ಅಂಗವಾಗಿ ಕಪ್ಪತ್ತಗುಡ್ಡದ ಐತಿಹಾಸಿಕ ನಂದಿವೇರಿ ಮಠದಲ್ಲಿ ಸೌಹಾರ್ದಯುತ ಇಫ್ತಿಯಾರ್ ಕೂಟವನ್ನು ಆಯೋಜಿಸಿ ಧರ್ಮಸೌಹಾರ್ದತೆಯ ಸುಂದರ ಸಂದೇಶವನ್ನು ಸಾರಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಶಿವಕುಮಾರ ಶ್ರೀಗಳು, "ರಂಜಾನ್ ಮಾಸವು ಆತ್ಮಶುದ್ಧಿ, ಸಹನೆ ಮತ್ತು ದಾನಧರ್ಮದ ಮಹತ್ವವನ್ನು ಸಾರುತ್ತದೆ. ಉಪವಾಸದ ನಂತರ ಒಟ್ಟಾಗಿ ಇಫ್ತಿಯಾರ್ ಸೇವಿಸುವುದು ಸಹೋದರತ್ವದ ಸಂಕೇತವಾಗಿದೆ. ಧರ್ಮಗಳ ಮೂಲ ಸಂದೇಶ ಮಾನವೀಯತೆ ಮತ್ತು ಪರಸ್ಪರ ಪ್ರೀತಿಯಾಗಿದೆ" ಎಂದು ಹೇಳಿದರು. ಇಂತಹ ಕಾರ್ಯಕ್ರಮಗಳು ಸಮಾಜದಲ್ಲಿ ಪರಸ್ಪರ ಬಾಂಧವ್ಯವನ್ನು ಬಲಪಡಿಸಿ, ಎಲ್ಲ ಧರ್ಮದ ಜನರಲ್ಲಿ ಗೌರವ ಮತ್ತು ನಂಬಿಕೆಯನ್ನು ಹೆಚ್ಚಿಸುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ಅಂಜುಮನ್ ಸಮಿತಿ ಅಧ್ಯಕ್ಷ ಮಾಬುಸಾಬ ಕಾಗದಗಾರ ಮಾತನಾಡಿ, "ಮಠದಲ್ಲಿ ಇಫ್ತಿಯಾರ್ ಕೂಟ ಆಯೋಜಿಸಿರುವುದು ಸಂತಸದ ವಿಚಾರ. ಇದು ಸಮಾಜದಲ್ಲಿ ಧರ್ಮಸೌಹಾರ್ದತೆಯನ್ನು ಮತ್ತಷ್ಟು ಬಲಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ಸಮುದಾಯದ ಜನರು ಭಾಗವಹಿಸಿ ಸೌಹಾರ್ದತೆಯ ಸಂದೇಶವನ್ನು ಸಾರಿದರು. ಸಮಾಜ ಸೇವಕರು, ಹಿರಿಯರು ಹಾಗೂ ಯುವಕರು ಸಹ ಉತ್ಸಾಹದಿಂದ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಬರಮಪ್ಪ ಕಿಲಾರಿ, ಲಕ್ಷ್ಮಣ ತಳವಾರ, ಸಲ್ಮಾನ್ ಚಿಕ್ಕೊಪ್ಪ, ಶರೀಫ ಶಿರಹಟ್ಟಿ, ಮಹಮ್ಮದ ಯಾಸೀನ್, ರಾಜೇಸಾಬ ಸೈಯದ್, ಕಾಶಿಮಸಾಬ ನಮಾಜಿ, ನಾನಾಸಾಬ ಶಿರಹಟ್ಟಿ, ಶಾಹಿಲ್ ಜಿಗಳೂರ ಸೇರಿದಂತೆ ಅನೇಕ ಅಂಜುಮನ್ ಸಮಿತಿ ಸದಸ್ಯರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.





ಲಕ್ಷ್ಮೇಶ್ವರ: ಪಟ್ಟಣದ ಆರಾಧ್ಯದೈವ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಯುಗಾದಿ ಪಾಡ್ಯದ ದಿನ ರುದ್ರಾಭಿಷೇಕ, ಪಂಚಾಮೃತ ಅಭಿಷೇಕ, ವಿಶೇಷ ಎಲೆಪೂಜಾ ಅಲಂಕಾರ ಮಾಡಲಾಗಿತ್ತು. ಬೆಳಿಗ್ಗೆಯಿಂದಲೇ ಭಕ್ತರು ಸರದಿ ಸಾಲಿನಲ್ಲಿ ನಿಂತು ದರ್ಶನಾಶೀರ್ವಾದ ಪಡೆದರು. ಅದೇ ರೀತಿ ಪಟ್ಟಣದ ವಿವಿಧ ದೇವಸ್ಥಾನ, ಮುಕ್ತಿಮಂದಿರ ಮಠಗಳ ದರ್ಶನ ಪಡೆದು ಹಬ್ಬದ ಸಂಪ್ರದಾಯ ಆಚರಿಸಿದರು.

**ಲಕ್ಷ್ಮೇಶ್ವರದಲ್ಲಿ ರೈತ ಸಮುದಾಯದ ಸಂಪ್ರದಾಯಬದ್ಧ ಆಚರಣೆ – ಎತ್ತು, ಟ್ರ್ಯಾಕ್ಟರ್ ಹಾಗೂ ಕೃಷಿ ಪರಿಕರಗಳಿಗೆ ಪೂಜೆ**

# ಯುಗಾದಿ ಪಾಡ್ಯ ಸಂಭ್ರಮ: ಭೂಮಿತಾಯಿ ಪೂಜೆಯೊಂದಿಗೆ ಕೃಷಿಗೆ ಶುಭಾರಂಭ!

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಯುಗಾದಿ ಪಾಡ್ಯ ಹಬ್ಬವನ್ನು ರೈತ ಸಮುದಾಯ ಸಂಪ್ರದಾಯಬದ್ಧವಾಗಿ ಸಡಗರ ಸಂಭ್ರಮದಿಂದ ಆಚರಿಸಿತು. ಪ್ರಾತಃಕಾಲದಲ್ಲೇ ಎತ್ತುಗಳು, ಚಕ್ಕಡಿ, ಟ್ರ್ಯಾಕ್ಟರ್ ಸೇರಿದಂತೆ ಕೃಷಿ ಪರಿಕರಗಳಿಗೆ ಪೂಜೆ ಸಲ್ಲಿಸಿ ನಂತರ ಹೊಲಗಳಿಗೆ ತೆರಳಿ ಭೂಮಿತಾಯಿಗೆ ಪೂಜೆ ಸಲ್ಲಿಸುವ ಮೂಲಕ ಹೊಸ ಕೃಷಿ ಚಟುವಟಿಕೆಗಳಿಗೆ ಚಾಲನೆ ನೀಡಲಾಯಿತು.

ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಶ್ರೀಮಠದ ಜಮೀನಿನಲ್ಲಿ ಭೂಮಿಪೂಜೆ ನೆರವೇರಿಸಿ ರೈತರಿಗೆ ಶುಭಾಶೀರ್ವಾದ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು,



ಉತ್ತಮ ಮಳೆ ಹಾಗೂ ಉತ್ತಮ ಬೆಳೆಯೊಂದಿಗೆ ಅನ್ನದಾತರ ಬದುಕು ಹಸನಾಗಲಿ ಎಂದು ಹಾರೈಸಿದರು. ಕೃಷಿಯೇ ನಮ್ಮ ಸಂಸ್ಕೃತಿ ಎಂಬ ಮನೋಭಾವದಿಂದ ರೈತರು ಹೆಮ್ಮೆಯಿಂದ ತೊಡಗಿಸಿಕೊಳ್ಳಬೇಕು ಹಾಗೂ ಸಾವಯುವ ಕೃಷಿಯತ್ತ ಗಮನ ಹರಿಸಬೇಕು ಎಂದು ಕರೆ ನೀಡಿದರು. ಹಬ್ಬದ ಅಂಗವಾಗಿ ಜನರು ಬೆಳಿಗ್ಗೆ ಹೊಸ ಉಡುಗೆ ತೊಟ್ಟು ದೇವಸ್ಥಾನಗಳಿಗೆ ತೆರಳಿ ಪೂಜೆ ಸಲ್ಲಿಸಿದರು. ಹಿರಿಯರಿಗೆ ನಮಸ್ಕರಿಸಿ ಬೇವು-ಬೆಲ್ಲ ಹಂಚುವ ಸಂಪ್ರದಾಯವನ್ನು ಪಾಲಿಸಿದರು. ವಿಶೇಷವಾಗಿ ರೈತರು ತಮ್ಮ ಎತ್ತುಗಳನ್ನು ಸಿಂಗಾರಿಸಿ ಹೊಲಗಳಿಗೆ ತೆರಳಿ ಭೂಮಿತಾಯಿ, ಎತ್ತುಗಳು ಮತ್ತು ಕೃಷಿ ಉಪಕರಣಗಳಿಗೆ ಪೂಜೆ ಸಲ್ಲಿಸಿ ಕೃಷಿಗೆ ಸಾಂಕೇತಿಕ ಚಾಲನೆ ನೀಡಿದರು. ಇದೇ ವೇಳೆ ವ್ಯಾಪಾರಸ್ಥರು ತಮ್ಮ ಅಂಗಡಿ ಮುಂಗಟ್ಟುಗಳಿಗೆ ಪೂಜೆ ಸಲ್ಲಿಸಿದರೆ, ಹಲವರು ಹೊಸ ವ್ಯವಹಾರಗಳಿಗೆ ಚಾಲನೆ ನೀಡಿದರು. ಕೆಲವರು ಹೊಸ ಮನೆ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿದರು. ಹೊಸ ವರ್ಷದ ಪ್ರಯುಕ್ತ ಆಭರಣ, ಬಟ್ಟೆ, ಇಲೆಕ್ಟ್ರಾನಿಕ್ ವಸ್ತುಗಳು ಹಾಗೂ ವಾಹನಗಳ ಖರೀದಿ ಕೂಡ ಜೋರಾಗಿತ್ತು. ಪಟ್ಟಣ ಸೇರಿದಂತೆ ಗ್ರಾಮೀಣ ಪ್ರದೇಶಗಳಲ್ಲಿ ಊರ ದೇವರ ಜಾತ್ರೆಗಳು, ಉತ್ಸವಗಳು ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದವು. ಹಬ್ಬದ ಮುನ್ನಾದಿನ ಉತ್ತಮ ಮಳೆಯಾದ ಹಿನ್ನೆಲೆ ರೈತರಲ್ಲಿ ಹೊಸ ಭರವಸೆ ಮೂಡಿದ್ದು, ಉತ್ತಮ ಕೃಷಿ ವರ್ಷವಾಗಲಿದೆ ಎಂಬ ವಿಶ್ವಾಸ ವ್ಯಕ್ತವಾಗಿದೆ.

> "ಕೃಷಿ ನಮ್ಮ ಸಂಸ್ಕೃತಿ; ಭೂಮಿತಾಯಿಯನ್ನು ನಂಬಿ ಬದುಕಿದವರಿಗೆ ಎಂದಿಗೂ ಕೇಡಾಗದು. ಈ ವರ್ಷ ಉತ್ತಮ ಮಳೆ, ಉತ್ತಮ ಬೆಳೆಯಾಗಿ ಅನ್ನದಾತನ ಬದುಕು ಹಸನಾಗಲಿ"
> **– ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು.**

# ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ ಸಂಕನೂರರ ಗೆಲುವು ನಿಶ್ಚಿತ: ಹಕಾರಿ ವಿಶ್ವಾಸ



**■ವಿಜಯಸಾಕ್ಷಿ ಸುದ್ದಿ, ಗದಗ**

ಕಳೆದ ಮೂರು ದಶಕಗಳಿಂದ ಕರ್ನಾಟಕ ರಾಜ್ಯ ಪದವಿಪೂರ್ವ ಮಹಾವಿದ್ಯಾಲಯಗಳ ನೌಕರರ ಹಿತಚಿಂತನೆಯ ಕಾರ್ಯಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡಿರುವ ಗೌರವಾಧ್ಯಕ್ಷ ಪ್ರೊ. ಎಸ್.ವಿ. ಸಂಕನೂರರು ಮೂರನೇ ಬಾರಿಗೆ ಪಶ್ಚಿಮ ಪದವೀಧರ ಮತಕ್ಷೇತ್ರದ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿರುವುದು ನೌಕರರ ಸಂಘದ ಸದಸ್ಯರು ಹಾಗೂ ಅಭಿಮಾನಿಗಳಲ್ಲಿ ಅಪಾರ ಉತ್ಸಾಹ ಮೂಡಿಸಿದೆ ಎಂದು ಸಂಘದ ಹಿರಿಯ ನಾಯಕ ಪ್ರೊ. ಜಿ.ಎಮ್. ಹಕಾರಿ ತಿಳಿಸಿದ್ದಾರೆ.

ಸಂಕನೂರರ ಹ್ಯಾಟ್ರಿಕ್ ಸ್ಪರ್ಧೆ ಸಂಘದ ಸದಸ್ಯರಿಗೆ ವಿಶೇಷ ಸಂತೋಷ ತಂದಿದ್ದು, ಈ ಹಿನ್ನೆಲೆಯಲ್ಲಿ ಅವರ ಗೃಹ ಕಚೇರಿಯಲ್ಲಿ ನೌಕರರ ಸಂಘದ ಪದಾಧಿಕಾರಿಗಳು ಮತ್ತು ಅಭಿಮಾನಿ ಬಳಗದವರು ಸನ್ಮಾನಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರೊ. ಹಕಾರಿ, ಸಂಕನೂರರು ವೇತನ ತಾರತಮ್ಯ ನಿವಾರಣೆ, ಸೇವಾ ಭದ್ರತೆ, ಪಶ್ಚಿಮ ಪದವೀಧರ ಇಲಾಖೆಯನ್ನು ಜಿಲ್ಲಾ ಪಂಚಾಯತ್ ವ್ಯಾಪ್ತಿಗೆ ತರುವ ಪ್ರಯತ್ನ ಹಾಗೂ ಪ್ರಾಚಾರ್ಯರ ಬಡ್ತಿ ಸೇರಿದಂತೆ ಹಲವು ನೌಕರರ ಹಿತಚಿಂತನೆಯ ವಿಷಯಗಳನ್ನು ಸದನದಲ್ಲಿ ಪರಿಣಾಮಕಾರಿಯಾಗಿ ಮಂಡಿಸಿ ವಿಶ್ವಾಸ ಗಳಿಸಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಎಸ್. ಎಚ್. ಬೀರಕಬ್ಬಿ, ಪ್ರಾ. ಎ.ಎಂ. ಅಂಗಡಿ, ಡಾ. ವೈ.ಆರ್. ಬೇಲೇರಿ ಸೇರಿದಂತೆ ಸಂಘದ ವಿವಿಧ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

ಸನ್ಮಾನ ಸ್ವೀಕರಿಸಿದ ಪ್ರೊ. ಎಸ್.ವಿ. ಸಂಕನೂರರು, ನೌಕರರ ಹಿತಕ್ಕಾಗಿ ಹೋರಾಟವನ್ನು ಮುಂದುವರಿಸುವುದಾಗಿ ಭರವಸೆ ನೀಡಿ ಎಲ್ಲರಿಗೂ ಧನ್ಯವಾದಗಳನ್ನು ಅರ್ಪಿಸಿದರು.

# ಸಮಸ್ಯೆಗಳ ತ್ವರಿತ ಪರಿಹಾರಕ್ಕಾಗಿ ಮಾ.23ರಂದು ವಿದ್ಯುತ್ ಅದಾಲತ್

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಎದುರಾಗುತ್ತಿರುವ ವಿದ್ಯುತ್ ಸಮಸ್ಯೆಗಳ ನಿವಾರಣೆಗೆ ಸರ್ಕಾರ ಮಹತ್ವದ ಕ್ರಮ ಕೈಗೊಂಡಿದೆ. ಇದರ ಅಂಗವಾಗಿ ಪ್ರತಿ ತಿಂಗಳ ಮೂರನೇ ಶನಿವಾರ ಗದಗ ನಗರ, ಗದಗ ಗ್ರಾಮೀಣ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಕಾರ್ಯ ಮತ್ತು ಪಾಲನೆ ಉಪವಿಭಾಗಗಳಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರ ನೇತೃತ್ವದಲ್ಲಿ ವಿದ್ಯುತ್ ಅದಾಲತ್ ನಡೆಸಲಾಗುತ್ತದೆ.

ಆದರೆ ಈ ತಿಂಗಳ ಮೂರನೇ ಶನಿವಾರ ರಜೆ ಇರುವ ಹಿನ್ನೆಲೆ, ದಿನಾಂಕ 23.03.2026 ರಂದು ಮಧ್ಯಾಹ್ನ 3.00 ಗಂಟೆಗೆ ವಿದ್ಯುತ್ ಅದಾಲತ್ ಆಯೋಜಿಸಲಾಗಿದೆ.

ಈ ಅದಾಲತ್‌ನಲ್ಲಿ ಗ್ರಾಹಕರು ತಮ್ಮ ವಿದ್ಯುತ್ ಸಂಬಂಧಿತ ಸಮಸ್ಯೆಗಳು–ಬಿಲ್ಲಿಂಗ್ ದೋಷ, ಸಂಪರ್ಕ ವ್ಯತ್ಯಯ, ವೋಲ್ಟೇಜ್ ಸಮಸ್ಯೆ ಸೇರಿದಂತೆ ವಿವಿಧ ತೊಂದರೆಗಳನ್ನು ನೇರವಾಗಿ ಅಧಿಕಾರಿಗಳ ಮುಂದಿಡಬಹುದು. ಸ್ಥಳದಲ್ಲಿಯೇ ಪರಿಹಾರ ನೀಡಲು ಕ್ರಮ ಕೈಗೊಳ್ಳಲಾಗುತ್ತದೆ.

ಹೀಗಾಗಿ ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವಂತೆ ಕೋರಲಾಗಿದೆ.

# ಮಾ.23ರಂದು ದೇವರ ದಾಸಿಮಯ್ಯ ಜಯಂತಿ

▶▶ಮೊದಲನೇ ಪುಟದಿಂದ

ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ. ಉಪಸ್ಥಿತರಾಗಲಿದ್ದಾರೆ.

ಆರೋಗ್ಯ ಇಲಾಖೆಯ ರಾಘವೇಂದ್ರ ಕೊಪ್ಪಳ ಅವರು ಉಪನ್ಯಾಸ ನೀಡಲಿದ್ದಾರೆ.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಸವರಾಜ ವಿ. ಬಳ್ಳಾರಿ ಅವರು ಸಾರ್ವಜನಿಕರಿಗೆ ಕಾರ್ಯಕ್ರಮಕ್ಕೆ ಆಗಮಿಸುವಂತೆ ಆಹ್ವಾನಿಸಿದ್ದಾರೆ.

# ನಾಳೆ "ರಾಣಿ ಚೆನ್ನಮ್ಮ ಸಾಂಸ್ಕೃತಿಕ ಭವನ" ನಿರ್ಮಾಣಕ್ಕೆ ಭೂಮಿ ಪೂಜೆ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಸಾಂಸ್ಕೃತಿಕ ವಿಕಾಸಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ವೀರಶೈವ ಪಂಚಮಸಾಲಿ ಜಾಗೃತ ಸೇವಾ ಸಂಘ, ಗಜೇಂದ್ರಗಡ–ಉಣಚಗೇರಿ ವತಿಯಿಂದ "ರಾಣಿ ಚೆನ್ನಮ್ಮ ಸಾಂಸ್ಕೃತಿಕ ಭವನ" ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ಸಿದ್ದಣ್ಣ ಬಂಡಿ ತಿಳಿಸಿದರು.

ಪಟ್ಟಣದ ಬಂಡಿ ಗಾರ್ಡನ್‌ನಲ್ಲಿ ಶುಕ್ರವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಿತ್ತೂರು ರಾಣಿ ಚೆನ್ನಮ್ಮ ಅವರ ಸಾಹಸ ಮತ್ತು ದೇಶಭಕ್ತಿಯನ್ನು ಸ್ಮರಿಸಿ, ಅವರ ಹೆಸರಿನಲ್ಲಿ ನಿರ್ಮಾಣವಾಗುತ್ತಿರುವ ಈ ಭವನವು ಯುವ ಪೀಳಿಗೆಗೆ ಪ್ರೇರಣೆಯಾಗಲಿದೆ ಎಂದು ಹೇಳಿದರು.

ಈ ಯೋಜನೆ ಶೀಘ್ರದಲ್ಲೇ ಪೂರ್ಣಗೊಳ್ಳಲಿದ್ದು, ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಇದು ಕೇಂದ್ರವಾಗಲಿದೆ ಎಂದರು.

ಭವನ ನಿರ್ಮಾಣಕ್ಕೆ ಶಾಸಕ ಜಿ.ಎಸ್. ಪಾಟೀಲ್ ಅವರು 25 ಲಕ್ಷ ಅನುದಾನ ನೀಡಿದ್ದು, ಒಂದು ವರ್ಷದೊಳಗೆ ಕಾಮಗಾರಿ ಪೂರ್ಣಗೊಳ್ಳುವಂತೆ ಬೆಂಬಲ ನೀಡುವುದಾಗಿ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮಕ್ಕೆ ಹಾಲಕೆರೆಯ ಅನ್ನದಾನೇಶ್ವರ ಮಠದ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸುವರು. ಉದ್ಘಾಟನೆಯನ್ನು ಶಾಸಕ ಜಿ.ಎಸ್. ಪಾಟೀಲ್ ನೆರವೇರಿಸಲಿದ್ದು, ಅಧ್ಯಕ್ಷತೆಯನ್ನು ಈಶಣ್ಣ ಮ್ಯಾಗೇರಿ ವಹಿಸುವರು.

ಮುಖ್ಯ ಅತಿಥಿಗಳಾಗಿ ಬಸವರಾಜೇಶ್ವರಿ ಚನ್ನು ಪಾಟೀಲ್, ವಿಶ್ವನಾಥ ಜಿಡ್ಡಿಬಾಗಿಲು, ರಮೇಶ ಪಲ್ಲೇದ, ಅನೀಲಕುಮಾರ ಪಲ್ಲೇದ, ಮಲ್ಲಿಕಾರ್ಜುನ ಬಿದರೂರ, ಪ್ರಭು ಮೇಟಿ, ಬಸಣ್ಣ ಮೂಲಿಮನಿ ಸೇರಿದಂತೆ ಜನಪ್ರತಿನಿಧಿಗಳು ಹಾಗೂ ಸಮಾಜದ ಗಣ್ಯರು ಭಾಗವಹಿಸಲಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಲ್ಲಿಕಾರ್ಜುನಗೌಡ ಮಲ್ಲನಗೌಡ್ರ, ಮುತ್ತಣ್ಣ ಮ್ಯಾಗೇರಿ, ಬಸವಂತಪ್ಪ ಪಲ್ಲೇದ, ಕಳಕಪ್ಪ ಸಗಟಿ, ಬಸುವರಾಜ ಕಡ್ಡಬಲಕಟ್ಟಿ, ಗುಂಡಪ್ಪ ಪಲ್ಲೇದ, ರಾಕೇಶ ಮಾರನಬಸರಿ, ವಿಜಯ ಬೂದಿಹಾಳ, ನಾಗರಾಜ ಪಾಟೀಲ್, ಮಹೇಶ ಪಲ್ಲೇದ, ಮಲ್ಲಿಕಾರ್ಜುನ ಕುಂದಗೋಳ, ತುಳಸಪ್ಪ ಸುಳ್ಯದ ಸೇರಿದಂತೆ ಇತರರು ಉಪಸ್ಥಿತರಿದ್ದರು.

**ಐಐಬಿದಲ್ಲಿ ಗೋಲ್ಡ್ ಮೆಡಲ್ ಸಮೇತ ರಾಜ್ಯಕ್ಕೆ ಫಸ್ಟ್ ರ್ಯಾಂಕ್ ಹಿನ್ನೆಲೆ**

# ಸಹನಾ ಕಾರ್ಕಳರಿಗೆ ಆರ್.ಎಸ್.ಎಸ್.ದಿಂದ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ಐ.ಐಬಿದಲ್ಲಿ ಗೋಲ್ಡ್ ಮೆಡಲ್ ಸಮೇತ ರಾಜ್ಯಕ್ಕೆ ಫಸ್ಟ್ ರ್ಯಾಂಕ್ ಗಳಿಸಿದ ಸಹನಾ ಎ. ಕಾರ್ಕಳ ಅವರಿಗೆ ಕರ್ನಾಟಕ ಉತ್ತರ ರಾಷ್ಟ್ರೀಯ ಸ್ವಯಂಸೇವಕ ಸಂಘದ ಸಾಮರಸ್ಯ ವೇದಿಯ (ಆರ್.ಎಸ್.ಎಸ್.) ಪದಾಧಿಕಾರಿಗಳು ಸಾಧನೆಯನ್ನು ಪ್ರಶಂಸಿ

ಸನ್ಮಾನಿಸಿ ಗೌರವಿಸಿ ಶುಭ ಕೋರಿದರು.

ಸಹನಾ ಕಾರ್ಕಳ ನಿವಾಸಕ್ಕೆ ಆಗಮಿಸಿದ ಸಾಮರಸ್ಯ ವೇದಿಕೆ ತಂಡ ಆಗಮಿಸಿ ಗೌರವಿಸಿದ ನಂತರ ವಿಡಿಎಸ್ ಟಿಸಿ ಕಾಲೇಜ ಪ್ರಾಚಾರ್ಯರು ಸಂಘದ ಪ್ರಮುಖರಾದ ಮಾರುತಿ ಕಟ್ಟಿಮನಿಯವರು

ಮಾತನಾಡಿ ಸತತ ಅಧ್ಯಯನ, ಉತ್ತಮ ಸಂಸ್ಕಾರ, ಪಾಲಕರ ಪ್ರೋತ್ಸಾಹ ದೊರೆತರೆ ಎಂತಹ ಸಾಧನೆ ಮಾಡಬಹುದು ಎಂಬುದಕ್ಕೆ ಸಹನಾ ಕಾರ್ಕಳ ಸಾಕ್ಷಿಯಾಗಿದ್ದಾರೆ ಎಂದರು.

ಸಾಧನೆ ಯಾರ ಸ್ವತ್ತಲ್ಲ ಆದರೆ ಸಾದಿಸುವ ಸಾಹಸ, ಛಲ ಮತ್ತು ಜಾಣ್ಮೆ ಇರಬೇಕೆಂದ ಮಾರುತಿ ಕಟ್ಟಿಮನಿಯವರು ಬರುವ ಸವಾಲುಗಳನ್ನೆ ಸಾಧನವಾಗಿ ಬಳಸಿಕೊಂಡ್ರೆ ಏನೆಲ್ಲ ಸಾಧನೆ ಮಾಡಬಹುದು ಎಂಬುದಕ್ಕೆ ಸಹನಾ ಕಾರ್ಕಳ ಸ್ಪಷ್ಟ ಎಕ್ಸಾಂಪಲ್ ಎಂದರು.

ಕರ್ನಾಟಕ ಉತ್ತರ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಸಾಮರಸ್ಯ ವೇದಿಕೆ ಪದಾಧಿಕಾರಿಗಳಾದ ಡಾ.ಉಮೇಶ ಹಾದಿ, ಡಾ.ಪ್ರಕಾಶ ಹೊಸಮನಿ, ರವಿಕಾಂತ ಅಂಗಡಿ, ಪ್ರೊ.ಹನುಮಂತ ಕಾಳೆ ಪ್ರೊ.ಶಶಿಧರ ಕುರಿ, ಡಾ.ಅನಂತ ಎಸ್.ಕಾರ್ಕಳ, ಶ್ರೀಮತಿ ಮಂಗಳಾ ಕಾರ್ಕಳ ಉಪಸ್ಥಿತರಿದ್ದರು.

# "ಸ್ಪರ್ಧಾತ್ಮಕ ಯುಗದಲ್ಲಿ ಮಾರ್ಗದರ್ಶನವೇ ಯಶಸ್ಸಿನ ಕೀಲಿ"

▶▶ಮೊದಲನೇ ಪುಟದಿಂದ

ಹಾವೇರಿ ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಡಾ. ಬಿ.ಎಂ. ಬೇವಿನಮರದ ಅವರು ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ನಂತರದ ವೃತ್ತಿ ಅವಕಾಶಗಳ ಕುರಿತು ಉಪನ್ಯಾಸ ನೀಡಿ, ವಿದ್ಯಾರ್ಥಿಗಳು ಭ್ರಮೆಯ ಲೋಕದಿಂದ ಹೊರಬಂದು ವಾಸ್ತವಿಕ ಜೀವನದತ್ತ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ಇಗ್ನೋ ನಿವೃತ್ತ ಪ್ರಾದೇಶಿಕ ನಿರ್ದೇಶಕ ಡಾ. ಜಿ.ಎಚ್. ಇಮ್ರಾಪೂರ ಅವರು ಸಿಇಟಿ, ನೀಟ್, ಜೆಇಇ, ಎನ್‌ಡಿಎ, ಎಸ್‌ಡಿಎ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ವಿವಿಧ ಅಧಿಕಾರಿಗಳು, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಚಿತ್ರಕಲಾ ಶಿಕ್ಷಕರಿಂದ ಆಯೋಜಿಸಿದ್ದ ಚಿತ್ರ ಪ್ರದರ್ಶನ ಹಾಗೂ ವಿಜ್ಞಾನ–ಗಣಿತ ಪ್ರಯೋಗಗಳ ಮಳಿಗೆಗಳು ವಿಶೇಷ ಆಕರ್ಷಣೆಯಾಗಿದ್ದವು.

# ಮಾನವೀಯತೆ ಮೆರೆದ ಸಾಲಿಡಾರಿಟಿ ಯೂತ್ ಮೂವ್ಮೆಂಟ್!




**■ವಿಜಯಸಾಕ್ಷಿ ಸುದ್ದಿ, ಗದಗ**

ಸಾಲಿಡಾರಿಟಿ ಯೂತ್ ಮೊಮೆಂಟ್ ಗದಗ ವತಿಯಿಂದ ಪವಿತ್ರ ರಮಜಾನ್ ಅಂಗವಾಗಿ ಗದಗ ನಗರದಲ್ಲಿ ಬಡ ವಿಧವೆಯರು ಮತ್ತು ಅನಾಥರಿಗೆ ದಿನಸಿ ಕಿಟ್‌ಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಯೂಸುಫ್ ಮುಲ್ಲಾ ವಹಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಪದಾಧಿಕಾರಿಗಳು, ರಮಜಾನ್ ಹಬ್ಬದ ನಿಜವಾದ ಅರ್ಥ ಸೇವೆ ಮತ್ತು ಸಹಾನುಭೂತಿ ಎಂದರು.

ಈ ಸಂದರ್ಭದಲ್ಲಿ ಕಾರ್ಯದರ್ಶಿ ರಿಯಾಜ್ ಶೇಖ, ಇಮಾಮ ಮೊರಬದ, ಜುನೇದ ಉಮಚಗಿ (ಹಿದಾಯತ್ ಹಾಗೂ ಜೆ.ಯು. ಶಾಲೆಯ ಅಧ್ಯಕ್ಷರು), ಹಾಜಿ ರಿಯಾಜ್ ಆತ್ತಾರ, ಫಾರೂಕ ರೋಣ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

ಇದೇ ವೇಳೆ ಸಂಘದ ಕಾರ್ಯಕರ್ತರಾದ ಅಬ್ದುಲ್ ಹಫೀಜ್ ಉಮಚಗಿ, ಆಕ್ಟರ್ ಅಲಿ ಆತ್ತಾರ, ಖಾಸಿಂ ದರ್ಗದ್, ಮೆಹಬೂಬ್ ಅಲಿ ರೋಣ, ವಸೀಮ್ ಅಹ್ಮದ್, ಸಾದಿಕ್ ಧಾರವಾಡ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.









VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka